ಕನ್ನಡ ದಿನಪತ್ರಿಕೆ
30 ಏಪ್ರಿಲ್ । ಮಂಗಳವಾರ
30 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 62 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಇಡೀ ದೇಶದ ಜನರ ಕೈಗೆ ಚೊಂಬು ಕೊಟ್ಟ ಮೋದಿ: ಸಿಎಂ ಸಿದ್ದರಾಮಯ್ಯ ವಾಗ್ದಾಳಿ

ಕೂಡ್ಲಿಗಿ: ಮೋದಿ ಪ್ರಧಾನಿಯಾಗಿ ಇಡೀ ದೇಶದ ಜನರ ಕೈಗೆ ಚೊಂಬು ಕೊಟ್ಟರು. ಶ್ರೀರಾಮುಲು ಸಚಿವರಾಗಿ, ಸಂಸದರಾಗಿ ಬಳ್ಳಾರಿ ಜಿಲ್ಲೆಗೆ ಚೊಂಬು ಕೊಟ್ಟರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿದರು.

ಬಳ್ಳಾರಿ–ವಿಜಯನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಇ.ತುಕಾರಾಂ ಅವರ ಗೆಲುವಿನ ಸಂದೇಶ ನೀಡಲು ಇಲ್ಲಿ ಸೋಮವಾರ ಸಂಘಟಿಸಿದ್ದ ಪ್ರಜಾಧ್ವನಿ–2 ಜನ ಸಮಾವೇಶವನ್ನು ಉದ್ಘಾಟಿಸಿ ಅಚರು ಮಾತನಾಡಿ, ಮೋದಿ ಮತ್ತು ಶ್ರೀರಾಮುಲು ಬಳ್ಳಾರಿ ಜನಕ್ಕೆ ಕೊಟ್ಟ ಚೊಂಬನ್ನು ನೀವು ಶ್ರೀರಾಮುಲು ಕೈಗೆ ವಾಪಸ್ ಕೊಡಿ' ಎಂದು ಮತದಾರರಿಗೆ ಸಲಹೆ ನೀಡಿದರು.

ಮೋದಿಗೆ ಸೋಲು ಖಚಿತವಾಗಿದೆ: ತಾವು ಮತ್ತೆ ಅಧಿಕಾರಕ್ಕೆ ಬರುವುದಿಲ್ಲ ಎನ್ನುವುದು ಮೋದಿ ಅವ–ರಿಗೆ ಖಚಿತವಾಗಿದೆ. ಆಕ್ಸಿಸ್ ಪ್ರಕಟಿಸಿದ ಖಚಿತವಾದ ಸಮೀಕ್ಷೆಗಳನ್ನು ಮೋದಿ ಡಿಲೀಟ್ ಮಾಡಿಸುತ್ತಿರುವುದಕ್ಕೆ ಸೋಲಿನ ಭಯವೇ ಕಾರಣ. ಸೋಲು ಖಚಿತವಾಗುತ್ತಿದ್ದಂತೆ ಹೆಚ್ಚೆಚ್ಚು ಸುಳ್ಳುಗಳನ್ನು



ಸೃಷ್ಟಿಸಿ ಭಾರತೀಯರ ನಡುವೆ ಬಿರುಕು ಮೂಡಿಸುತ್ತಾರೆ. ಇದರ ಬಗ್ಗೆ ಜಾಗ್ರತೆ ವಹಿಸಿ ಎಂದು ಸಿ.ಎಂ.ಎಚ್ಚರಿಕೆ ನೀಡಿದರು.

ಆಕ್ಸಿಸ್ ಪ್ರಕಟಿಸಿದ ಖಚಿತವಾದ ಸಮೀಕ್ಷೆಗಳನ್ನು ಮೋದಿ ಡಿಲೀಟ್ ಮಾಡಿಸುತ್ತಿರುವುದಕ್ಕೆ ಸೋಲಿನ ಭಯವೇ ಕಾರಣ. ಬಿಜೆಪಿ 200 ಸ್ಥಾನ ಗೆದ್ದರೆ ಹೆಚ್ಚು ಎನ್ನುವ ಸಮೀಕ್ಷೆಗಳು ಬಂದಿವೆ. ತಮ್ಮ ಸೋಲನ್ನು ಖಚಿತಪಡಿಸುವ ಸಮೀಕ್ಷೆಗಳನ್ನು ಡಿಲೀಟ್ ಮಾಡಿಸುತ್ತಿದ್ದಾರೆ' ಎಂದು ಸಿದ್ದರಾಮಯ್ಯ ಹೇಳಿದರು.

ಮೋದಿ ಮಾಮೂಲಾಗಿಯೇ ಹಸಿ ಹಸಿ ಸುಳ್ಳು ಹೇಳುತ್ತಾರೆ. ಈಗ ಇವರ ಸೋಲಿನ ಖಚಿತ ಸಮೀಕ್ಷೆಗಳು ಬರುತ್ತಿದ್ದಂತೆ ಭಯಾನಕವಾದ ಸುಳ್ಳುಗಳನ್ನು ಸೃಷ್ಟಿಸಿ ಹೋದಲ್ಲಿ ಬಂದಲ್ಲಿ ಸುಳ್ಳು ಹಂಚುತ್ತಾ ಅಡ್ಡಾಡುತ್ತಾರೆ. ಇವರ ಸುಳ್ಳುಗಳಿಗೆ ಭಾರತೀಯರು ಮತ್ತೆ ಮತ್ತೆ ತಲೆ ಒತ್ತೆ ಇಡುವುದಿಲ್ಲ ಎಂದರು.

ಮೀಸಲಾತಿ ವಿಷಯ ಪ್ರಸ್ತಾಪಿಸಿ ಹಿಂದುಳಿದವರನ್ನು ಮುಸ್ಲಿಮರ ವಿರುದ್ಧ ಎತ್ತಿಕಟ್ಟುವ ಮೋದಿ ಸ್ಕೆಚ್ ವಿಫಲಗೊಳಿಸಿ ಎಂದು ಕರೆ ನೀಡಿದರು.

ಮಹಿಳೆಯರ ಖಾತೆಗೆ ಒಂದು ಲಕ್ಷ ರೂಪಾಯಿ–ಇಡೀ ದೇಶದ ರೈತರ ಸಾಲ ಮನ್ನಾ: ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಬರುತ್ತಿದ್ದಂತೆ ಮಹಿಳೆಯರ ಖಾತೆಗೆ ವರ್ಷಕ್ಕೆ ಒಂದು ಲಕ್ಷ ರೂಪಾಯಿ ಬಂದು ಬೀಳತ್ತೆ. ನಿರುದ್ಯೋಗಿಗಳ ಖಾತೆಗೂ ಒಂದು ಲಕ್ಷ ರೂಪಾಯಿ ಜಮೆ ಆಗುತ್ತದೆ. ಇಡೀ ದೇಶದ ರೈತರ ಸಾಲ ಮನ್ನಾ ಆಗುತ್ತದೆ ಎಂದು ಸಿದ್ದರಾಮಯ್ಯ ಭರವಸೆ ನೀಡಿದರು.

ಕಾಂಗ್ರೆಸ್ ನ ಮನಮೋಹನ್ ಸಿಂಗ್ ಪ್ರಧಾನಮಂತ್ರಿಯಾಗಿದ್ದಾಗ ಇಡೀ ದೇಶದ ರೈತರ 76 ಸಾವಿರ ಕೋಟಿ ಸಾಲ ಮನ್ನಾ ಮಾಡಿದರು. ಆದರೆ ಮೋದಿ ಅಂಬಾನಿ, ಅದಾನಿಯಂತಹ ಆಗರ್ಭ ಶ್ರೀಮಂತರ 16 ಲಕ್ಷ ಕೋಟಿ ರೂಪಾಯಿ ಸಾಲ ಮನ್ನಾ ಮಾಡಿದರು. ರೈತರ ಸಾಲ ಮನ್ನಾ ಮಾಡಲು ಒಪ್ಪದ ಮೋದಿ ಯಾರ ಪರ ಎನ್ನುವುದನ್ನು ದೇಶದ ಜನರಿಗೆ ಮನವ–ರಿಕೆಯಾಗಿದೆ ಎಂದು ಸಿ.ಎಂ ಹೇಳಿದರು.

ಬಳ್ಳಾರಿ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಇ.ತುಕಾರಾಂ ಗೆಲ್ಲಲೇಬೇಕು. ಶ್ರೀರಾಮುಲು ಸೋಲಲೇಬೇಕು. ಇದು ನನ್ನ ಸ್ಪಷ್ಟ ತೀರ್ಮಾನ. ನನ್ನ ತೀರ್ಮಾನಕ್ಕೆ ಮತ್ತುತುಕಾರಾಂ ಅವರಿಗೆ ಆಶೀರ್ವದಿಸಿ' ಎಂದು ಮನವಿ ಮಾಡಿದರು.

ಕೆಪಿಸಿಸಿ ಅಧ್ಯಕ್ಷ, ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಜಮೀರ್ ಅಹ್ಮದ್ ಖಾನ್, ರಾಮಲಿಂಗಾರೆಡ್ಡಿ ಸೇರಿ ವಿಜಯನಗರ, ಬಳ್ಳಾರಿ ಜಿಲ್ಲೆಯ ಶಾಸಕರುಗಳು, ಜಿಲ್ಲಾ ಮತ್ತು ತಾಲ್ಲೂಕು ಹಾಗೂ ಬ್ಲಾಕ್ ಮುಖಂಡರುಗಳು ಉಪಸ್ಥಿತರಿದ್ದು ಈ.ತುಕಾರಾಂ ಅವರ ಗೆಲುವಿಗೆ ಶಪಥ ಮಾಡಿದರು.

ತಾವು ಮೀಸಲಾತಿಗೆ ವಿರುದ್ಧವಿಲ್ಲ ಎಂದು ಸಂಘ ಪರಿವಾರದ ಮೋಹನ್ ಭಾಗವತ್ ಹೇಳಿರುವುದು ಹಸಿ ಸುಳ್ಳು. ಮೀಸಲಾತಿ ವಿರೋಧಿಸಿ ರಾಜ್ಯಸಭಾ ಸದಸ್ಯ, ಬಿಜೆಪಿಯ ರಾಷ್ಟ್ರೀಯ ಉಪಾಧ್ಯಕ್ಷ ರಾಮಾ ಜೋಯಿಸ್ ಕೋರ್ಟ್ ಮೆಟ್ಟಿಲೇರಿದ್ದು ದೇಶದ ಹಿಂದುಳಿದ ಸಮುದಾಯಗಳು ಮರೆತಿಲ್ಲ. ಮಂಡಲ್ ವರದಿಗೆ ವಿರೋಧ ಮಾಡಿ ಹಿಂದುಳಿದ ಜಾತಿ–ಸಮುದಾಯಗಳ ಮಕ್ಕಳನ್ನು ಆತ್ಮಹತ್ಯೆಗೆ ತಳ್ಳಿದ್ದು ಇದೇ ಬಿಜೆಪಿ. ಇಂಥಾ ಹಲವು ಉದಾಹರಣೆಗಳನ್ನು ಉಲ್ಲೇಖಿಸಿದ ಮುಖ್ಯಮಂತ್ರಿಗಳು ಬಿಜೆಪಿ ಪರಿವಾರ ಹುಟ್ಟಿನಿಂದಲೇ ಮೀಸಲಾತಿ ವಿರೋಧಿಗಳು. ಆದರೆ ಸುಳ್ಳುಗಳ ಮೂಲಕ ಹಿಂದುಳಿದವರನ್ನು ಪದೇ ಪದೇ ವಂಚಿಸುವುದು ಇವರಿಗೆ ರೂಢಿಯಾಗಿದೆ.



## ಮಾಜಿ ಸಿಎಂ ಎಸ್‌ಎಂ ಕೃಷ್ಣ ಆರೋಗ್ಯದಲ್ಲಿ ಏರುಪೇರು: ಆಸ್ಪತ್ರೆಗೆ ದಾಖಲು

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಎಸ್‌ಎಂ ಕೃಷ್ಣ ಅವರ ಆರೋಗ್ಯದಲ್ಲಿ ಏರುಪೇರಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ಇಂದು ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎನ್ನಲಾಗಿದೆ.

ಕೆಲವು ದಿನಗಳ ಹಿಂದಷ್ಟೇ ಎಸ್‌ಎಂ ಕೃಷ್ಣ ಅವರು ಅನಾರೋಗ್ಯದಿಂದ ಆಸ್ಪತ್ರೆಗೆ ದಾಖಲಾಗಿದ್ದರು. ಜ್ವರ, ಕೆಮ್ಮು ಕಾಣಿಸಿಕೊಂಡ ಹಿನ್ನೆಲೆ ಬೆಂಗಳೂರಿನ ವಿಠಲ್ ಮಲ್ಯ ರಸ್ತೆಯ ವೈದೇಹಿ ಆಸ್ಪತ್ರೆಗೆ ದಾಖಲಾ ಚಿಕಿತ್ಸೆ ಪಡೆದುಕೊಂಡು ಡಿಸ್ಚಾರ್ಜ ಆಗಿದ್ದರು.

ಸೋಮವಾರ ಎಸ್‌ಎಂ ಕೃಷ್ಣ ಅವರ ಆರೋಗ್ಯದಲ್ಲಿ ಏರುಪೇರಾಗಿದ್ದು, ಇದೀಗ ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ. ಸದ್ಯ ಅವರ ಆರೋಗ್ಯ ಸ್ಥಿರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

## 'ಕಾನ್ಸ್ ಸ್ಟೇಬಲ್' ಮನೆ ಗೋಡೆ ಮೇಲೆಯೇ 'ದೇಶ ವಿರೋಧಿ ಬರಹ'



ಬೆಂಗಳೂರು: ನಗರದಲ್ಲಿನ ಪೊಲೀಸ್ ಠಾಣೆಯೊಂದರಲ್ಲಿ ಪೇದೆಯಾಗಿ ಕಾರ್ಯ ನಿರ್ವಹಿಸುತ್ತಿರುವಂತ ನಿವಾಸದ ಗೋಡೆಯ ಮೇಲೆಯೇ ದೇಶ ವಿರೋಧಿ ಬರಹ ಬರೆದಿರೋದಾಗಿ ತಿಳಿದು ಬಂದಿದೆ.

ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲೂಕಿನ ಬಂಡಾಪುರದಲ್ಲಿ ಪೊಲೀಸ್ ಪೇದೆ ಮುನಿರಾಜು ಎಂಬುವರ ಮನೆಯ ಗೋಡೆಯ ಮೇಲೆ ದೇಶ ವಿರೋಧಿ ಬರಹವನ್ನು ಬರೆದಿರೋದಾಗಿ ಹೇಳಲಾಗುತ್ತಿದೆ. ಬೆಂಗಳೂರಿನ ಬಾಣಸವಾಡಿ ಪೊಲೀಸ್ ಠಾಣೆಯಲ್ಲಿ ಕಾನ್ ಸ್ಟೇಬಲ್ ಆಗಿ ಕಾರ್ಯನಿರ್ವಹಿಸುತ್ತಿರುವಂತ ಮುನಿರಾಜು ಮನೆಯ ಗೋಡೆಯ ಮೇಲೆಯೇ ದೇಶ ವಿರೋಧಿ ಬರಹ ಬರೆದಿರೋದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಈ ಬಗ್ಗೆ ಮತ್ತಷ್ಟು ಮಾಹಿತಿ ತಿಳಿದು ಬರಬೇಕಿದೆ.

## ಪೋಕ್ಸೋ ಕೇಸ್: ಮುರುಘಾ ಶ್ರೀ ಮತ್ತೆ ಜೈಲು ಪಾಲು



ಚಿತ್ರದುರ್ಗ: ಪೋಕ್ಸೋ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಚಿತ್ರದುರ್ಗದ ಮುರುಘಾ ಮಠದ ಡಾ.ಶಿವಮೂರ್ತಿ ಮುರುಘಾಶ್ರೀ ಮತ್ತೆ ಜೈಲುಪಾಲಾಗಿದ್ದಾರೆ.

ಮುರುಘಾ ಶ್ರೀಗಳ ನ್ಯಾಯಾಂಗ ಬಂಧನ ಅವಧಿ ವಿಸ್ತರಿಸಿ ಸುಪ್ರೀಂ ಕೋರ್ಟ್ ಆದೇಶ ನೀಡಿರುವ ಬೆನ್ನಲ್ಲೇ ದಾವಣಗೆರೆಯಿಂದ ಆಗಮಿಸಿದ ಮುರುಘಾ ಶ್ರೀ ಇಂದು ಚಿತ್ರದುರ್ಗದ 1ನೇ ಹೆಚ್ಚುವರಿ ಸೆಷನ್ಸ್ ಕೋರ್ಟ್ ಗೆ ಬಂದು ಶರಣಾದರು. ಈ ವೇಳೆ ಶ್ರೀಗಳನ್ನು ನ್ಯಾಯಂಗ ಬಂಧನಕ್ಕೆ ನೀಡಿ ಕೋರ್ಟ್ ಆದೇಶ ಹೊರಡಿಸಿದೆ. ಈ ಹಿನ್ನೆಲೆಯಲ್ಲಿ ಪೊಲೀಸರು ಮುರುಘಾ ಶ್ರೀಗಳನ್ನು ಪೊಲೀಸ್ ವ್ಯಾನ್ ನಲ್ಲಿ ಜೈಲಿಗೆ ಕರೆದೊಯ್ಯಲು ಸಿದ್ಧತೆ ನಡೆಸಿದ್ದಾರೆ.

ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಮುರುಘಾ ಶ್ರೀಗಳ ನ್ಯಾಯಾಂಗ ಬಂಧನ ಅವಧಿಯನ್ನು ವಿಸ್ತರಿಸಿ ಆದೇಶ ಹೊರಡಿಸಿತ್ತು. ಅಲ್ಲದೇ ಸಂತ್ರಸ್ತೆಯರನ್ನು ವಿಶೇಷ ಕೋರ್ಟ್ ನಲ್ಲಿ ವಿಚಾರಣೆ ನಡೆಸುವಂತೆ ಸೂಚಿಸಿತ್ತು.

## ಕಾರಿನಲ್ಲಿ 1.99 ಕೋಟಿ ರೂ ಪತ್ತೆ: ಕಾಂಗ್ರೆಸ್ ಮುಖಂಡ ಶರಣಕುಮಾರ್ ಮೋದಿ ಸೇರಿ ನಾಲ್ವರ ವಿರುದ್ಧ ಎಫ್‌ಐಆರ್ ದಾಖಲು

ಬೆಂಗಳೂರು: ಇತ್ತೀಚಿಗೆ ಕಾರಿನಲ್ಲಿ 1.99 ಕೋಟಿ ರೂಪಾಯಿ ಹಣ ಪತ್ತೆಯಾದ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಮುಖಂಡ, ಮಾಜಿ ಮೇಯರ್ ಶರಣಕುಮಾರ್ ಮೋದಿ ಮತ್ತು ಇತರ ಮೂವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಚುನಾವಣಾ ಆಯೋಗ ಸೋಮವಾರ ತಿಳಿಸಿದೆ.

ಕಳೆದ ಶನಿವಾರ ಬೆಳಗ್ಗೆ ಆದಾಯ ತೆ–ರಿಗೆ ಇಲಾಖೆ ಅಧಿಕಾರಿಗಳು, ಶರಣಕುಮಾರ್ ಮೋದಿಯವರ ಕಾರಿನಲ್ಲಿ ಸಾಗಿಸುತ್ತಿದ್ದ ದಾಖಲೆರಹಿತ 1.99 ಕೋಟಿ ರೂಪಾಯಿ ಹಣವನ್ನು ವಶಪಡಿಸಿಕೊಂಡ ನಂತರ ಈ ಕ್ರಮ ಕೈಗೊಳ್ಳಲಾಗಿದೆ.

ಕಾಂಗ್ರೆಸ್ ಮುಖಂಡ ಮತ್ತು ಕಲಬುರಗಿಯ ಮಾಜಿ ಮೇಯರ್ ಶರಣಕುಮಾರ್ ಮೋದಿ ಮತ್ತು ಇತರ ಮೂವರ ವಿರುದ್ಧ ವಾಡಿ ರೈಲ್ವೆ ಪೊಲೀಸ್ ಠಾಣೆಯಲ್ಲಿ ಏಪ್ರಿಲ್ 28 ರಂದು ಎಫ್‌ಐಆರ್ ದಾಖಲಿಸಲಾಗಿದೆ ಮತ್ತು 1.99 ಕೋಟಿ ರೂಪಾಯಿ ವಶಪಡಿಸಿಕೊಳ್ಳಲಾಗಿದೆ ಎಂದು ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

## ಇಂದು ಗೋಕಾಕ್ ನಲ್ಲಿ ಪ್ರಜಾಧ್ವನಿ–2 ಸಮಾವೇಶ: ಸಿಎಂ–ಡಿಸಿಎಂ ಸೇರಿದಂತೆ ಹಲವು ನಾಯಕರು ಭಾಗಿ



ಬೆಳಗಾವಿ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಪರ ಪ್ರಚಾರ ನಿಮಿತ್ತ ಗೋಕಾಕ ವಾಲ್ಮೀಕಿ ಕ್ರೀಡಾಂಗಣದಲ್ಲಿ ಮಂಗಳವಾರ ಪ್ರಜಾಧ್ವನಿ–2 ಸಮಾವೇಶ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಲಕ್ಷ್ಮೀ ಹೆಬ್ಬಾಳಕರ್ ಅವರು ಸೋಮವಾರ ಕ್ರೀಡಾಂಗಣಕ್ಕೆ ಭೇಟಿ ನೀಡಿ, ಕಾರ್ಯಕ್ರಮದ ಸಿದ್ಧತೆ ಕುರಿತು ಸ್ಥಳ ಪರಿಶೀಲನೆ ನಡೆಸಿದರು. ಇಂದು ಬೆಳಗ್ಗೆ 11 ಗಂಟೆಗೆ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮಕ್ಕೆ ಗೋಕಾಕ್ ಅರಭಾವಿ ಕ್ಷೇತ್ರದಿಂದ ಸುಮಾರು 20 ಸಾವಿರಕ್ಕೂ ಹೆಚ್ಚು ಜನರು ಆಗಮಿಸುವ ನಿರೀಕ್ಷೆ ಇದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಸೇರಿದಂತೆ ಸಚಿವ ಸಂಪುಟದ ಹಲವು ಸದಸ್ಯರು, ಜಿಲ್ಲೆಯ ಶಾಸಕರು, ಬ್ಲಾಕ್ ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು ಸೇ–ರಿದಂತೆ ಹಲವು ಮುಖಂಡರು ಹಾಜರಿರುವರು ಎಂದು ಗೋಕಾಕ್ ಕ್ಷೇತ್ರದ ಕಾಂಗ್ರೆಸ್ ಮುಖಂಡ ಡಾ.ಮಹಾಂತೇಶ್ ಕಡಾಡಿ ತಿಳಿಸಿದರು.

ಈ ವೇಳೆ ಡಾ.ಮಹಾಂತೇಶ್ ಕಡಾಡಿ, ಸಿದ್ದಲಿಂಗ ದಳವಾಯಿ, ಅಶೋಕ್ ಪೂಜಾರಿ, ಯಲ್ಲಪ್ಪ ಪೂಜಾರಿ, ಗಂಗಾಧರ ಬಡಕುಂದ್ರಿ, ಸಿಸಿ ಕೊಣ್ಣೂರ ಉಪಸ್ಥಿತ–ರಿದ್ದರು.

## ಬೆಂಗಳೂರು: ಅಪರಾಧ ತಡೆಗೆ ರಾತ್ರಿ ಪೊಲೀಸ್ ಗಸ್ತು ಹೆಚ್ಚಳ; ನಗರ ಪೊಲೀಸ್ ಆಯುಕ್ತ ಬಿ ದಯಾನಂದ್




ಬೆಂಗಳೂರು: ರಾಜ್ಯ ರಾಜಧಾನಿಯಲ್ಲಿ ಅಪರಾಧ ತಡೆಗೆ ನಗರದಾದ್ಯಂತ ಸಿಸಿಟಿವಿ ಕ್ಯಾಮೆರಾಗಳ ಸಂಖ್ಯೆಯನ್ನು ಹೆಚ್ಚಿಸಲು ಮತ್ತು ರಾತ್ರಿ ಗಸ್ತು ಹೆಚ್ಚಿಸಲು ಯೋಜನೆ ರೂಪಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಬಿ ದಯಾನಂದ್ ಅವರು ಭಾನುವಾರ ಹೇಳಿದರು.

ಅರಮನೆ ಮೈದಾನದ ಗಾಯತ್ರಿ ವಿಹಾರದಲ್ಲಿ ಮಾಸಿಕ 'ಜನಸಂಪರ್ಕ ಸಭೆ'ಯನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ಹೆಚ್ಚುತ್ತಿರುವ ಅಪರಾಧಗಳನ್ನು ತಡೆಯಲು ಈ ಉಪಕ್ರಮವನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಸಂವಾದದ ಸಮಯದಲ್ಲಿ, ಮಹಿಳೆಯೊಬ್ಬರು ವಸಂತ್ ನಗರದಲ್ಲಿ ಮಹಿಳಾ ಪೇಯಿಂಗ್ ಗೆಸ್ಟ್ ವಸತಿಗಳ ಬಗ್ಗೆ ಕೇಳಿದರು, ಪಿಜಿಗಳಿಗೆ ತಡವಾಗಿ ಬರುವ ಮತ್ತು ಈವ್ ಟೀಸರ್‌ಗಳಿಂದ ಕಿರುಕುಳವನ್ನು ಎದು–ರಿಸುತ್ತಿರುವ ಉದ್ಯೋಗಸ್ಥ ಮಹಿಳೆಯರು ಎದು–ರಿಸುತ್ತಿರುವ ಸವಾಲುಗಳ ಕುರಿತು ಧ್ವನಿ ಎತ್ತಿದರು.

ಈ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ರಾತ್ರಿ ಗಸ್ತು ಹೆಚ್ಚಿಸುವಂತೆ ಆಯುಕ್ತರಿಗೆ ಮನವಿ ಮಾಡಿದರು.

ವಿನಾಯಕ ವೃತ್ತದ ಪ್ಯಾಲೇಸ್ ಗುಟ್ಟಹಳ್ಳಿಯ ಎರಡೂ ಬದಿಯಲ್ಲಿ ವಾಹನಗಳ ನಿಲುಗಡೆ ಕುರಿತು ಮತ್ತೊಂದು ಚರ್ಚೆ ನಡೆಯಿತು.

ಇದರಿಂದ ಸಂಚಾರ ದಟ್ಟಣೆ ಉಂಟಾಗಿ ಪ್ರಯಾಣಿಕರು ಪರದಾಡುವಂತಾಗಿದೆ. ಸುಗಮ ಸಂಚಾರಕ್ಕೆ ಕ್ರಮಕೈಗೊಳ್ಳುವಂತೆ ನಿವಾಸಿಗಳು ಆಯುಕ್ತ–ರಿಗೆ ಮನವಿ ಮಾಡಿದರು. ಕೂಡಲೇ ಸಮಸ್ಯೆ ಬಗೆಹ–ರಿಸುವಂತೆ ಸಂಚಾರಿ ಪೊಲೀಸ್ ಅಧಿಕಾರಿಗಳಿಗೆ ದಯಾನಂದ್ ಅವರು ಸೂಚಿಸಿದರು.

ಇದೇ ವೇಳೆ ಅಸಮರ್ಪಕ ಬೀದಿ ದೀಪಗಳ ಬಗ್ಗೆ ನಿವಾಸಿಗಳು ಕಳವಳ ವ್ಯಕ್ತಪಡಿಸಿದರು, ರಾತ್ರಿಯಲ್ಲಿ ಸುರಕ್ಷಿತವಾಗಿ ನಡೆದಾಡುವುದು ಸವಾಲಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಅಧಿಕಾರಿಗಳೊಂದಿಗೆ ಮಾತನಾಡುವುದಾಗಿ ತಿಳಿಸಿದರು.

## ಬಿಜೆಪಿ ಸಂಸದ ಶ್ರೀನಿವಾಸ ಪ್ರಸಾದ್ ನಿಧನ



ಬೆಂಗಳೂರು: ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಸಂಸದ ಶ್ರೀನಿವಾಸ ಪ್ರಸಾದ್ (76) ಅವರು ರಾತ್ರಿ 1.20ಕ್ಕೆ ಹೃದಯಾಘಾತದಿಂದ ನಿಧನರಾಗಿದ್ದಾರೆ.

ಬಹು ಅಂಗಾಂಗ ಸಮಸ್ಯೆಗಳಿಂದ ಬಳಲುತ್ತಿದ್ದ ಶ್ರೀನಿವಾಸ ಪ್ರಸಾದ್ ಅವರು ಮೂರು ದಿನಗಳ ಹಿಂದೆ ಬೆಂಗಳೂರಿನ ಓಲ್ಡ್ ಏರ್‌ಪೋರ್ಟ್ ರಸ್ತೆಯಲ್ಲಿರುವ ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದರು. ತುರ್ತು ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಮಧ್ಯರಾತ್ರಿ ಹೃದಯಾಘಾತದಿಂದ ಮೃತಪಟ್ಟಿದ್ದಾರೆ.ಇವರಿಗೆ ಪತ್ನಿ ಹಾಗೂ ಮೂವರು ಹೆಣ್ಣು ಮಕ್ಕಳಿದ್ದಾರೆ. ಪತ್ನಿ ಭಾಗ್ಯಲಕ್ಷ್ಮಿ ಪ್ರಸಾದ್, ಪುತ್ರಿಯರಾದ ಪ್ರತಿಮಾ ಪ್ರಸಾದ್, ಪೂರ್ಣಿಮಾ ಪ್ರಸಾದ್, ಪೂನಂ ಪ್ರಸಾದ್.

ಶ್ರೀನಿವಾಸ ಪ್ರಸಾದ್ ಅಳಿಯಂದಿರು: ದೇವರಾಜು ಐಆರ್‌ಎಸ್ ಅಧಿಕಾರಿ, ಹರ್ಷವರ್ಧನ್ ನಂಜನಗೂಡು ಮಾಜಿ ಶಾಸಕ, ಡಾ.ಎನ್.ಎಸ್. ಮೋಹನ್ (ಮೂಳೆ ಮತ್ತು ಕೀಲು ತಜ್ಞ) ಈ ಬಾರಿ ಚಾಮರಾಜನಗರ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದರು.

ಇತ್ತೀಚಿನ ದಿನಗಳಲ್ಲಿ ತಂದೆಯ ಆರೋಗ್ಯ ಗಂಭೀರವಾಗಿತ್ತು. ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿದ್ದೆವು. ವೈದ್ಯರು ಅವರನ್ನು ಗುಣಪಡಿಸಲು ಶ್ರಮ ಪಟ್ಟಿದ್ದಾರೆ. ಆದರೆ ಚಿಕಿತ್ಸೆ ಫಲಕಾ–ರಿಯಾಗದೆ ನಮ್ಮನ್ನು ಅಗಲಿದ್ದಾರೆ. ಮೈಸೂ–ರಿನ ಜಯಲಕ್ಷ್ಮೀಪುರಂ ನಿವಾಸದಲ್ಲಿ ವಿಧಿವಿಧಾನ ಪೂರೈಸಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ ಎಂದು ಶ್ರೀನಿವಾಸ ಪ್ರಸಾದ್ ಪುತ್ರಿ ಪೂರ್ಣಿಮಾ ಪ್ರಸಾದ್ ಹೇಳಿದರು.

ಮಣಿಪಾಲ್ ಆಸ್ಪತ್ರೆಯಲ್ಲಿ ದಾಖಲಾಗಿದ್ದ ವೇಳೆ ಸ್ವಲ್ಪ ಚೇತ–ರಿಕೆ ಕಂಡಿದ್ದರು. ಎಲ್ಲರ ಜೊತೆ ಚೆನ್ನಾಗಿಯೇ ಮಾತನಾಡಿದ್ದರು. ರವಿವಾರದಿಂದ ಮಾತನಾಡಲು ಆಗುತ್ತಿರಲಿಲ್ಲ. ಈ ವೇಳೆ ಪೆನ್ನು ಪೇಪರ್ ಕೊಟ್ಟಿದ್ವಿ. ಆಗ ಪೇಪರ್‌ನಲ್ಲಿ ಛಿಂಜಿಜಿಜಜ ಅಂತ ಬರೆದಿದ್ದರು. ಎರಡು ಗುಟುಕು ಕಾಫಿ ಕುಡಿದರು. ಮಧ್ಯರಾತ್ರಿ ಚಿಕಿತ್ಸೆ ಫಲಿಸದೆ ನಿಧನರಾದರು ಎಂದು ತಿಳಿಸಿದರು.

ಇತ್ತೀಚೆಗೆ ರಾಜಕೀಯ ನಿವೃತ್ತಿ ಘೋಷಣೆ ಮಾಡಿದ್ದರು. ಆದರೆ ಅವರು ತಮ್ಮ ಜರ್ನಿಯಿಂದಲೇ ನಿವೃತ್ತಿ ತೆಗೆದುಕೊಳ್ಳುತ್ತಾರೆ ಅಂದುಕೊಂಡಿರಲಿಲ್ಲ. ಇದು ಬಹಳ ದುಃಖಕರವಾದ ವಿಷಯ. ಅವರಿಗೆ ಹೈಲಿ ಡಯಾಬಿಟಿಕ್ ಸಮಸ್ಯೆ ಇತ್ತು. 11 ವರ್ಷದ ಹಿಂದೆ ಅವರಿಗೆ ರಿನಲ್ ಟ್ರಾನ್ಸ್ ಪ್ಲಾಂಟ್ ಆಗಿತ್ತು ಎಂದರು.

ವಿ.ಶ್ರೀನಿವಾಸಪ್ರಸಾದ್ ಅವರು ಮೈಸೂರು, ಚಾಮರಾಜನಗರ ಭಾಗದ ಪ್ರಭಾವಿ ದಲಿತ ಮುಖಂಡರಾಗಿದ್ದರು. ಸ್ವಾಭಿಮಾನಿ ರಾಜಕಾರಣಿ ಎಂದೇ ಹೆಸರಾಗಿದ್ದರು. ಮೂಲತಃ ಮೈಸೂ–ರಿನ ಅಶೋಕಪುರಂನವರಾದ ಶ್ರೀನಿವಾಸಪ್ರಸಾದ್ ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದಿಂದ ಆರು ಬಾರಿ ಸಂಸದರಾಗಿ ಆಯ್ಕೆಯಾಗಿದ್ದರು.

## ಪ್ರಧಾನಿ ಗೆ ಪ್ರಶ್ನೆ ಮಾಡಿದ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ

ನವದೆಹಲಿ: ನೂರಾರು ಮಹಿಳೆಯರ ಜೀವನವನ್ನು ಹಾಳು ಮಾಡಿದ ನಾಯಕನ ಬಗ್ಗೆ ಏಕೆ ಮೌನವಾಗಿದ್ದೀರಿ ಎಂದು ಪ್ರಧಾನಿ ನರೇಂದ್ರ ಮೋದಿಯವರಿಗೆ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಪ್ರಶ್ನೆ ಮಾಡಿದ್ದಾರೆ.

ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಳ್ಳುವ ಮೂಲಕ ಪ್ರಜ್ವಲ್ ರೇವಣ್ಣ ಕುರಿತು ಮೋದಿ ಮೌನವಾಗಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಎಕ್ಸ್‌ನಲ್ಲೇನಿದೆ..?: ಪ್ರಧಾನಿ ಅವರು ಭುಜದ ಮೇಲೆ ಕೈಯಿಟ್ಟು ಫೋಟೋ ತೆಗೆಸಿಕೊಳ್ಳುವ ನಾಯಕ ಹಾಗೂ ಚುನಾವಣೆಗೂ 10 ದಿನಗಳ ಹಿಂದೆ ಸ್ವತಃ ಪ್ರಧಾನಿಯೇ ಆ ನಾಯಕನ ಪರ ಪ್ರಚಾರಕ್ಕೆ ತೆರಳಿದ್ದರು.

ಅಲ್ಲದೇ ಪ್ರಧಾನಿಯವರು ನಾಯಕನನ್ನು ವೇದಿಕೆಯಲ್ಲಿ ಹಾಡಿ ಹೊಗಳಿದ್ದರು. ಆದ–'ರೆ ಇಂದು ಆ ಕರ್ನಾಟಕದ ನಾಯಕ ದೇಶದಿಂದಲೇ ತಲೆಮರೆಸಿಕೊಂಡಿದ್ದಾನೆ. ಆತನ ವಿರುದ್ಧದ ಆರೋಪಗಳನ್ನು ಕೇಳಿದಾಗ ನಿಜಕ್ಕೂ ಮೈ ನಡುಗುತ್ತದೆ

. ಆತ ನೂರಾರು ಮಹಿಳೆಯರ ಜೀವನವನ್ನೇ ಹಾಳು ಮಾಡಿದ್ದಾನೆ. ಇಷ್ಟಲ್ಲಾ ಆದರೂ ಮೋದಿಜಿ, ನೀವು ಇನ್ನೂ ಸುಮ್ಮನಿರುತ್ತೀರಾ ಎಂದು ಕಿಡಿಕಾರಿದ್ದಾರೆ.

ಸಂಸದ ಪ್ರಜ್ವಲ್ ರೇವಣ್ಣ ತಂದೆ ಹಾಗೂ ಮಾಜಿ ಸಚಿವ ಹೆಚ್.ಡಿ.ರೇವಣ್ಣ ವಿರುದ್ಧವೂ ದೌರ್ಜನ್ಯ ಆರೋಪ ಕೇಳಿಬಂದಿದೆ.

ರೇವಣ್ಣ ಅವರ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಸಂತ್ರಸ್ತೆ ದೂರು ದಾಖಲಿಸಿದ್ದಾರೆ. ಹೊಳೆನರಸೀಪುರ ನಗರ ಪೊಲೀಸ್ ಠಾಣೆಯಲ್ಲಿ ಇಬ್ಬರ ವಿರುದ್ಧ ದೂರು ದಾಖಲಾಗಿದೆ. ಎಫ್‌ಐಆರ್‌ನಲ್ಲಿ ಹೆಚ್.ಡಿ.ರೇವಣ್ಣ ಎ1 ಮತ್ತು ಪ್ರಜ್ವಲ್ ರೇವಣ್ಣ ಎ2 ಆರೋಪಿಯಾಗಿದ್ದಾರೆ. **354 A, 354 D, 509** ಅಡಿ ಪ್ರಕರಣ ದಾಖಲಾಗಿದೆ. ಇತ್ತ ಪ್ರಕರಣವನ್ನು ಎಸ್‌ಐಟಿ ತನಿಖೆಗೆ ಸರ್ಕಾರ ಆದೇಶಿಸಿದೆ.

## ರಾಜ್ಯ ಸರ್ಕಾರದ ಗ್ಯಾರಂಟಿಗಳನ್ನು ಟೀಕಿಸುವವರು ಶತ ಮೂರ್ಖರು: ಡಾ.ಸಿ.ಎಸ್. ದ್ವಾರಕನಾಥ

ಚಿಕ್ಕೋಡಿ: ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜನಕ್ಕೆ ನೀಡುವ ಮೂಲಕ ಮಾನವ ಹಕ್ಕುಗಳನ್ನು ರಕ್ಷಿಸುತ್ತಿದೆ. ಆದ–'ರೆ ಸರ್ಕಾರದ ಗ್ಯಾರಂಟಿಗಳನ್ನು ಟೀಕಿಸುವ ಬಿಜೆಪಿಯವರು ಶತ ಮೂರ್ಖರು ಎಂದು ಕೆಪಿಸಿಸಿ ಕಾನೂನು ವಕ್ತಾರ ಡಾ. ಸಿ.ಎಸ್. ದ್ವಾರಕನಾಥ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಕವಟಗಿಮಠ ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಯವರು ಜನ, ಜೀವ ವಿರೋಧಿಗಳು, ಸಿಎಂ ಸಿದ್ದರಾಮಯ್ಯನವರು ಕೇಂದ್ರ ಸರ್ಕಾರಕ್ಕೆ ಅಕ್ಕಿ ಕೊಡಿ ನಾವು ಹಣವನ್ನು ಸಂದಾಯ ಮಾಡುತ್ತೇವೆಂದರೂ ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯ ಸರ್ಕಾರಕ್ಕೆ ಅಕ್ಕಿಯನ್ನು ನೀಡಲಿಲ್ಲ. ಆದರೆ ಅದೇ ಅಕ್ಕಿ



ಹಾಳಾದ ಬಳಿಕ ಇಡೀ ದಾಸ್ತಾನದಲ್ಲಿ ಅಕ್ಕಿಯನ್ನು ಸಮುದ್ರಕ್ಕೆ ಚೆಲ್ಲಿದರು, ಆದ–'ರೆ ಜನಕ್ಕೆ ಅಕ್ಕಿ ನೀಡಲು ನಿರಾಕರಿಸಿದರು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಆರ್ಥಿಕವಾಗಿ ವ್ಯತ್ಯಾಸಗಳನ್ನು ಕಂಡಾಗ ತಳ ಸಮುದಾಯವನ್ನು ಮೇಲೆತ್ತಬೇಕೆಂದು ಸಂವಿಧಾನದಲ್ಲಿ ಉಲ್ಲೇಖಿಸಿದ್ದಾರೆ. ಆದರೆ ಇಂದು ದೇಶದಲ್ಲಿ ಸಾಮಾನ್ಯ ಮನುಷ್ಯನ ಆದಾಯ ದಿನಕ್ಕೆ75 ರೂಪಾಯಿ ಇದ್ದರೆ, ಇನ್ನೊಂದು ಕಡೆ ಅಂಬಾನಿ, ಅದಾನಿ ಆದಾಯ ಒಂದು ದಿನಕ್ಕೆ2600 ಕೋಟಿ ರೂಪಾಯಿ ಇದೆ. 75 ರೂಪಾಯಿ ಆದಾಯ ಇದ್ದವರಿಗೆ ಅನ್ನ ನೀಡುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ. ಆಹಾರದ ಹಕ್ಕು, ವಸತಿ ಹಕ್ಕು, ಜೀವಿಸುವ ಹಕ್ಕು, ಶಿಕ್ಷಣದ ಹಕ್ಕು, ಆರೋಗ್ಯದ ಹಕ್ಕನ ಎಲ್ಲರಿಗೂ ನೀಡಬೇಕೆಂಬುವುದು ಸಂವಿಧಾನದಲ್ಲಿಯೇ ಇದೆ. ಆದರೆ ಕನಿಷ್ಠ ಅಕ್ಷರ ಜ್ಞಾನ ಇಲ್ಲದ ಶತ ಮೂರ್ಖರು ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ಟೀಕಿಸುತ್ತಿದ್ದಾರೆಂದು ಬಿಜೆಪಿಯವರ ವಿರುದ್ಧ ವಾಗ್ದಾಳಿ ನಡೆಸಿದರು.

ಇನ್ನು ಬಿಜೆಪಿಯವರು ತಮ್ಮ ಪಕ್ಷದ ಚಿಹ್ನೆ ಹಾಕಿ ಸುಳ್ಳು ಜಾಹೀರಾತು ನೀಡುತ್ತಿದ್ದು, ಈ ಬಗ್ಗೆ ಈಗಾಗಲೇ ಶಿವಮೊಗ್ಗದ ವಕೀಲರು ಚುನಾವಣಾ ಆಯೋಗ್ಯಕ್ಕೆ ದೂರು ನೀಡುತ್ತಿದ್ದಾರೆ. ದೂರು ನೀಡಿದರು ಚುನಾವಣಾ ಆಯೋಗದವರು ಸ್ಪಂದಿಸದಿದ್ದರೆ ನಾವು ಕೋರ್ಟ್ ಮೋರೆ ಹೋಗುತ್ತೇವೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಂಡಾಯ ಸಾಹಿತಿ ಇಮ್ಮಡಿ ಸರ್, ಅಲೆಮಾರಿ ಬುಡಕಟ್ಟು ಮಹಾಸಭಾದ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರಾಜ ವಕೀಲರು, ಸಂ–ಜಯ ಲೋಕಾಪುರೆ, ಉದಯ ವಾಗ್ಮೋರೆ, ರೀಹಾನಾ ನದಾಫ್, ಮಹಾದೇವ ಪೋಳ, ಸಂಜಯ ಲೋಕಾಪುರೆ, ದಯಾನಂದ ಕಾಂಬಳೆ ಸೇರಿದಂತೆ ಹಲವರು ಇದ್ದರು.

## ಹಾವೇರಿ–ಗದಗ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗೆಲ್ಲಿಸಿ: ಸಚಿವ ಸತೀಶ್ ಜಾರಕಿಹೊಳಿ ಕರೆ



ಹಾವೇರಿ: ಹಾವೇರಿ, ಗದಗ ಲೋಕಸಭೆ ಮತಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಹೆಚ್ಚಿನ ಮತಗಳನ್ನು ನೀಡಿ ಗೆಲ್ಲಿಸಬೇಕೆಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಕರೆ ನೀಡಿದರು.

ಹಾವೇರಿ ಜಿಲ್ಲೆಯ ರಟ್ಟಿಹಳ್ಳಿಯ ವೀರಭದ್ರೇಶ್ವರ ಸಮುದಾಯದ ಭವನದಲ್ಲಿ ರಟ್ಟಿಹಳ್ಳಿ ಕಾಂಗ್ರೆಸ್ ಸಮಿತಿ ಹಮ್ಮಿಕೊಂಡಿದ್ದ ಲೋಕಸಭೆ ಚುನಾವಣೆಯ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿ, ಏಳು ಜನ ಶಾಸಕರ ಒಮ್ಮತದಿಂದ ಹಾವೇರಿ, ಗದಗ ಲೋಕಸಭೆ ಕ್ಷೇತ್ರದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಅಭ್ಯರ್ಥಿಯಾಗಿ ಆಯ್ಕೆಮಾಡಲಾಗಿದೆ. ಈಗಾಗಲೇ ಏಳು ಜನ ಶಾಸಕ ಅಭ್ಯರ್ಥಿ ಗೆಲುವಿಗೆ ಹಗಲಿರುಳು ಶ್ರಮಿಸುತ್ತಿದ್ದು, ನಮ್ಮ ಅಭ್ಯರ್ಥಿ ಆನಂದಸ್ವಾಮಿ ಗೆಲ್ಲುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂದರು.

# ಪ್ರಿಯಂಕಾ ಜಾರಕಿಹೊಳಿ ಅವರನ್ನು ಬಹುಮತ ಅಂತರದಿಂದ ಗೆಲ್ಲಿಸಿ: ಡಾ. ತೇಜಸ್ವಿನಿ ಗೌಡ

ಬೆಳಗಾವಿ: "ಜಾತಿ ರಾಜಕಾರಣ ಮಾಡುವುದರಲ್ಲಿ ಬಿಜೆಪಿಯವರು ಮಗ್ನರಾಗಿದ್ದಾರೆ. ಇದರಿಂದ ದೇಶದ ಆರ್ಥಿಕ ವ್ಯವಸ್ಥೆಗೆ ತೀವ್ರ ಹೊಡೆತ ಬೀಳುತ್ತಿದೆ. ದೇಶದ ಪ್ರಗತಿಗೆ, ಅಭಿವೃದ್ಧಿಗೆ ಆದ್ಯತೆ ನೀಡುವ ಕಾಂಗ್ರೆಸ್‌ಗೆ ಮತದಾರರು ಆಶೀರ್ವಾದ ಮಾಡಿ, ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಬಹುಮತ ಅಂತರದಿಂದ ಗೆಲ್ಲಿಸಿ" ಎಂದು ಕೆಪಿಸಿಸಿ ವಕ್ತಾರೆ ಡಾ. ತೇಜಸ್ವಿನಿ ಗೌಡ ಮನವಿ ಮಾಡಿಕೊಂಡರು.

ಚಿಕ್ಕೋಡಿ ತಾಲೂಕಿನ ಕಬ್ಬೂರ ಪಟ್ಟಣ ಪಂಚಾಯತ್‌ನಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರ ಪರ ಮತಯಾಚಿಸಿ ಅವರು ಮಾತನಾಡಿದರು.



ಚಿಕ್ಕೋಡಿ ಭಾಗದಲ್ಲಿ ಯುವನಾಯಕಿಗೆ ಇಷ್ಟೊಂದು ಅಪಾರ ಬೆಂಬಲ ನೋಡಿ ತುಂಬಾ ಖುಷಿಯಾಗಿದೆ. ಮತದಾರರು ಇನ್ನೂ ಹೆಚ್ಚಿನ ಮಟ್ಟದಲ್ಲಿ ಪ್ರಿಯಂಕಾ ಗೆಲುವಿಗೆ ಶಕ್ತಿ ತುಂಬಿ.

ಪ್ರಿಯಂಕಾ ಜಾರಕಿಹೊಳಿ ಅವರನ್ನು ಚುನಾವಣೆಗೆ ನಿಲ್ಲಿಸಿರೋದೆ ಗೆಲ್ಲಿಸೋದಕ್ಕಾಗಿ, ಆ ಗೆಲುವು ಬಹುಮತ ಅಂತರ ಗೆಲುವು ಆಗಿರಬೇಕು ಎಂದು ಹೇಳಿದರು.

ಕೇಂದ್ರಕ್ಕೆ 18 ಸಾವಿರ ಕೋಟಿ ರೂ. ಕೇಳಿದರೆ, ಕೇಂದ್ರ ಸರ್ಕಾರದ 3500 ಕೋಟಿ ಅನುದಾನ ನೀಡಿದೆ. ಇವನ್ನೆಲ್ಲ ಪ್ರಶ್ನೆ ಮಾಡಬೇಕಾದರೆ ಅಣ್ಣಾಸಾಬ್ ಜೊಲ್ಲೆ ಅವರಂತವರನ್ನು ಆಯ್ಕೆಮಾಡಿದರೆ ಪ್ರಯೋಜವಿಲ್ಲ. ನಿಮ್ಮ ಪರ ಧ್ವನಿ ಎತ್ತುವ, ಹಗಲಿರುಳು ದುಡಿಯುವ ಸಚಿವ ಸತೀಶ್ ಜಾರಕಿಹೊಳಿ ಅವರ ಪುತ್ರಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸಿ ಎಂದು ತಿಳಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮಾತನಾಡಿ, ಲೋಕಸಭೆ ಚುನಾವಣೆಯಲ್ಲಿ ಎಲ್ಲರೂ ಕಾಂಗ್ರೆಸ್ ಪಕ್ಷವನ್ನೆ ಬೆಂಬಲಿಸಿ. ಸ್ವಾತಂತ್ರ್ಯ ಪೂರ್ವದಿಂದಲೂ ಕಾಂಗ್ರೆಸ್ ಪಕ್ಷ ದೇಶಕ್ಕೆ ಅಪಾರ ಕೊಡುಗೆ ನೀಡಿದೆ.

ಕ್ಷೇತ್ರ ದ ಅಭಿವೃದ್ದಿ ಜತೆಗೆ ನಿಮ್ಮ ಕುಂದು ಕೊರತೆಗಳನ್ನು ನಿವಾರಿಸಲು ನಾನು ಪ್ರಾಮಾಣಿಕವಾಗಿ ಮಾಡಲಾಗುವುದು ಎಂದರು.

ಕೇಂದ್ರದಲ್ಲೂ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ 25 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗುವುದು. ಮಹಿಳೆಯರಿಗೆ 1 ಲಕ್ಷ ರೂ. ಮನೆಗೆ ಬರುವುದು, ಮತಪ್ರಭು ಯೋಚನೆ ಮಾಡಿ, ನಿಮ್ಮ ಹಕ್ಕನ್ನು ಚಲಾಯಿಸಿ ಕಾಂಗ್ರೆಸ್ ಅಧಿಕೃತ ಅಭ್ಯರ್ಥಿಯಾಗಿರುವ ನಿಮ್ಮ ಮನೆ ಮಗಳನ್ನು ಬೆಂಬಲಿಸಿ ಎಂದು ಮನವಿ ಮಾಡಿದರು.

ಕಾಂಗ್ರೆಸ್ ಮುಖಂಡ ಅರ್ಜುನ ನಾಯಕವಾಡಿ ಮಾತನಾಡಿ, ಮೇ. 7 ತಾರೀಖು ನಡೆಯುವ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಹೆಚ್ಚಿನ ಮತ ನೀಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪಪಂ ಮೀಲನ ಪಾಟೀಲ್, ಕೆಪಿಸಿಸಿ ಕಾರ್ಯದರ್ಶಿ ಮಹಾವೀರ ಮೋಹಿತೆ, ಅರ್ಜುನ ನಾಯಕವಾಡಿ, ಜಿಲ್ಲಾ ಕಾಂಗ್ರೆಸ್ ಮಹಿಳಾ ಘಟಕದ ನಿರ್ಮಲಾ ಪಾಟೀಲ್ ಸೇರಿದಂತೆ ಹಲವರು ಇದ್ದರು.

# ಸಿಟಿ ಸೆಂಟರ್ ಮಾಲ್ ನಲ್ಲಿ ಗಮನ ಸೆಳೆಯುತ್ತಿರುವ ಚುನಾವಣೆ ಮಾಡೆಲ್

ಶಿವಮೊಗ್ಗ: ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯ ಎಲ್ಲ ಮತದಾರರು ಮತಗಟ್ಟೆಗಳಿಗೆ ಬಂದು ಮತ ಚಲಾವಣೆ ಮಾಡುವ ಮೂಲಕ ಶೇ.100 ರಷ್ಟು ಮತದಾನ ಆಗುವಂತೆ ಸಹಕರಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸ್ನೇಹಲ್ ಸುಧಾಕರ್ ಲೋಖಂಡೆ ಅವರು ಮನವಿ ಮಾಡಿದರು.

ಶಿವಮೊಗ್ಗ ನಗರದ ಶಿವಪ್ಪನಾಯಕ ಮಾರುಕಟ್ಟೆಯ ಸಿಟಿ ಸೆಂಟರ್ ಮಾಲ್ನಲ್ಲಿ ಏ.28 ರ ಸಂಜೆ ಜಿಲ್ಲಾ ಸ್ವೀಪ್ ಸಮಿತಿ ಮತ್ತು ಶಿವಮೊಗ್ಗ ಮತದಾನ ಜಾಗೃತಿ ವೇದಿಕೆ ವತಿಯಿಂದ ಏರ್ಪಡಿಸಲಾಗಿದ್ದ ಮತದಾನ ಜಾಗೃತಿ ಕಾರ್ಯಕ್ರಮ ಹಾಗೂ ಮಾಲ್ನಲ್ಲಿ ಸ್ಥಾಪಿಸಲಾಗಿರುವ ಚುನಾವಣಾ ಮಾಡೆಲ್‌ನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿವಮೊಗ್ಗ ನಗರ ಪ್ರದೇಶದಲ್ಲಿ ಮತದಾನ ಪ್ರಮಾಣ ಕಡಿಮೆ ಇದೆ. ಮತದಾನ ಪ್ರಮಾಣ ಹೆಚ್ಚಬೇಕು.

ಬೆಂಗಳೂರಿನಲ್ಲಿ ಶೇಕಡ 50 ಕ್ಕಿಂತ ಕಡಿಮೆ ಮತದಾನ ನಡೆದಿದ್ದು ಆ ರೀತಿ ನಮ್ಮ ಶಿವಮೊಗ್ಗದಲ್ಲಿ ಆಗಬಾರದು. ಮತ ಚಲಾಯಿಸುವ ಮುಖಾಂತರ ದೇಶದ ಅಭಿವೃದ್ಧಿಯಲ್ಲಿ ನಾವೆಲ್ಲ ಪಾಲ್ಗೊಳ್ಳಬೇಕೆಂದು ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಗಾಯತ್ರಿ ಮಾತನಾಡಿ, ಜಿಲ್ಲೆಯಲ್ಲಿ ಕಳೆದ ಬಾರಿ ಲೋಕಸಭಾ ಚುನಾವಣೆಯಲ್ಲಿ ಶೇಕಡ 76 ರಷ್ಟು ಮತದಾನ ನಡೆಡಿದ್ದು, ನಗರ ಪ್ರದೇಶದಲ್ಲಿ



ಶೇಕಡಾ 60 ರಷ್ಟು ಮಾತ್ರ ಮತದಾನ ನಡೆದಿದೆ.

ನಗರ ಪ್ರದೇಶದ ಜನರು ಮತದಾನ ಮಾಡುವಲ್ಲಿ ಆಸಕ್ತಿ ಕಡಿಮೆ ತೋರುತ್ತಿದ್ದಾರೆ. ದೇಶದ ಅಭಿವೃದ್ಧಿ ಮತ್ತು ಜನರ ಜೀವನ ರೂಪಿಸುವುದಕ್ಕೆ ಮತದಾನ ಮಾಡುವುದು ಪ್ರತಿಯೊಬ್ಬ ಪ್ರಜ್ಞಾವಂತನ ಕರ್ತವ್ಯವಾಗಿದ್ದು ಎಲ್ಲರೂ ಮತದಾನ ಮಾಡುವಂತೆ ಮನವಿ ಮಾಡಿದರು.

ರಾಜ್ಯ ಮಟ್ಟದ ಸ್ವೀಪ್ ತರಬೇತುದಾರ ನವೀದ್ ಅಹಮದ್ ಪರ್ವೀಜ್ ಮಾತನಾಡಿ ಮೇ 7 ಕ್ಕೆ ಬೆಳಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆವರೆಗೆ ಮತದಾನ ಮಾಡಬಹುದು. ವಯೋವೃದ್ಧರು ಮತ್ತು ವಿಶೇಷ ಚೇತನರಿಗೆ ಮನೆಯಿಂದಲೇ ಮತ ಹಾಕುವ ಅವಕಾಶ ಈ ಬಾರಿ ನೀಡಲಾಗಿದೆ.

ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ಅಕ್ರಮಗಳು ಕಂಡುಬಂದಲ್ಲಿ ತಮ್ಮ ಮೊಬೈಲ್ನಲ್ಲಿ ಸಿವಿಜಿಲ್ ಆ್ಯಪ್ ಡೌನ್ಲೋಡ್ ಮಾಡಿಕೊಂಡು ಆ ಮೂಲಕ ದೂರು ಸಲ್ಲಿಸಬಹುದು ಮತ್ತು 1950 ಗೆ ಕರೆ ಮಾಡಿ ಸಹ ದೂರು ನೀಡಬಹುದು ಎಂದರು.

ಸ್ವೀಪ್ ಐಕಾನ್ ನಿವೇದನ್ ನೆಂಪೆ ಮಾತನಾಡಿ, ಶಿವಮೊಗ್ಗದ ಜನರು ಪ್ರಜ್ಞಾವಂತರೆಂದು ತೋರಿಸಿಕೊಳ್ಳಲು ಒಳ್ಳೆಯ ಅವಕಾಶ ದೊರಕಿದೆ.

ಬುದ್ಧಿವಂತರು ಮತದಾನ ಮಾಡುವ ಮೂಲಕ ಪ್ರಜ್ಞಾವಂತರಾಗುತ್ತಾರೆ ಎಂದ ಅವರು ಮೇ 7ಕ್ಕೆ ಎಲ್ಲರೂ ತಪ್ಪದೇ ಮತದಾನ ಮಾಡಿ ಎಂದು ಕೋರಿದರು.

ಕಲಾವಿದರಾದ ಸತೀಶ ಪುರಪ್ಪೆಮನೆ ಹಾಗೂ ತಂಡದವರು ಚುನಾವಣಾ ಮಾಡೆಲ್‌ನ್ನು ಸಿದ್ದಪಡಿಸಿದ್ದು ಸಿಟಿ ಸೆಂಟರ್ ಮಾಲ್ನಲ್ಲಿ ಎಲ್ಲರ ಗಮನ ಸೆಳೆಯುತ್ತಿದೆ.

ಕಾರ್ಯಕ್ರಮದಲ್ಲಿ ಮಹಾನಗರಪಾಲಿಕೆಯ ಅಧಿಕಾರಿ ಸುಪ್ರಿಯ, ಸಿಟಿ ಸೆಂಟರ್ ಮಾಲ್‌ನ ದರ್ಶನ್, ಪಾಲಿಕೆ ಮತ್ತು ಜಿಲ್ಲಾ ಪಂಚಾಯತ್ ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರು ಹಾಜರಿದ್ದರು.

# ಸಂವಿಧಾನ ಬದಲಿಸಲು ಅಷ್ಟು ಸರಳವಾಗಿ ಬಿಡ್ತೀವಾ: ನಟ ಪ್ರಕಾಶ ರೈ

ವಾಡಿ: ಅನೇಕ ಕಷ್ಟ ಅವಮಾನಗಳನ್ನು ಸಹಿಸಿಕೊಂಡು, ತನಗಾದ ಅನ್ಯಾಯ ಬೇರೆ ಯಾರಿಗೂ ಆಗಬಾರದು ಎಂಬ ಕಾಳಜಿ ಮತ್ತು ಪ್ರೀತಿಯಿಂದ ಅಂಬೇಡ್ಕರ್ ಅವರು ಬರೆದ ಸಂವಿಧಾನ ಬದಲಿಸುತ್ತೇನೆ ಎಂದು ಬೊಗಳಿದರೆ, ನಾವು ಅಷ್ಟು ಸರಳವಾಗಿ ಬಿಡ್ತೀವಾ? ಎಂದು ಬಹುಭಾಷಾ ನಟ ಪ್ರಕಾಶ ರೈ ಪ್ರಶ್ನಿಸಿದರು.

ಚಿತ್ತಾಪುರ ತಾಲೂಕಿನ ವಾಡಿ ಪಟ್ಟಣದಲ್ಲಿ ಶನಿವಾರ ಸಂಜೆ ಬೌದ್ಧ ಸಮಾಜದ ವತಿಯಿಂದ ಏರ್ಪಡಿಸಲಾಗಿದ್ದ ಡಾ.ಬಿ.ಆರ್. ಅಂಬೇಡ್ಕರ್ ಅವರ 133ನೇ ಜಯಂತ್ಯೋತ್ಸವದ ಹಿನ್ನಲೆಯಲ್ಲಿ ನಡೆದ ಬಹಿರಂಗ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅತ್ತ ಕೆಲ ಮಹಾನ್ ಚಾಣಕ್ಯರು ಸಂವಿಧಾನ ಬದಲಿಸುತ್ತೇವೆ ಎಂದು ಮಾತನಾಡುತ್ತಿದ್ದಾರೆ. ಇತ್ತ ಮಹಾಪ್ರಭು



ಸಂವಿಧಾನ ಬದಲಿಸುವುದಿಲ್ಲ ಎಂದು

ದೇಶದಲ್ಲಿ? ಮತ್ತೆ ವರ್ಣಾಶ್ರಮ ಪದ್ಧತಿ ಜಾರಿಗೊಳಿಸುವ ಪ್ರಯತ್ನ ಸದ್ದಿಲ್ಲದೆ ನಡೆಯುತ್ತಿದೆ ಎಂಬುದು ನಮಗೆ ಗೊತ್ತಾಗುತ್ತಿದೆ ಪ್ರಾಣವನ್ನು ಕೊಟ್ಟಾದರೂ ಸರಿ ನಮ್ಮ ಸಂವಿಧಾನವನ್ನು ಉಳಿಸಿಕೊಳ್ಳುತ್ತೇವೆ ಎಂದರು.

ಇದು ಅಂಬೇಡ್ಕರ್ ಅವರ ಕುರಿತು ಮಾತನಾಡುವ ಕಾಲವಲ್ಲ. ಪ್ರತಿಯೊಬ್ಬರಿಗೂ ಹಕ್ಕುಗಳನ್ನು ಕೊಟ್ಟ ಅಂಬೇಡ್ಕರ್ ವಿರಚಿತ ಸಂವಿಧಾನವನ್ನು ಉಳಿಸಿಕೊಳ್ಳುವ ಕಾಲ. ಹೋರಾಡುವ ಮತ್ತು ಪ್ರಶ್ನಿಸುವ ಕಾಲವಿದು.

ಜನರನ್ನು ಬೇಲಿಯೊಳಗಿಟ್ಟು ದರ್ಶನ ನೀಡಲು ಯಾರ್ಲಿಯೊಳಗೆ ಬರುವ ಮಹಾಪ್ರಭುವಿಗೆ 400 ದಾಟುತ್ತೇವೆ ಎಂಬ ಅಹಂಕಾರ ತಲೆಗೇರಿದೆ.

ಮತ್ತೆ ತಮ್ಮ ಆಸ್ಥಾನಕ್ಕೆ ಹೊಗಳುಭಟ್ಟರನ್ನೇ ಕರೆಯಿಸಿಕೊಳ್ಳಲು ಮತ ಸಾಹಸ ಮಾಡುತ್ತಿದ್ದಾರೆ ಎಂದು ಪರೋಕ್ಷವಾಗಿ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಸಂವಿಧಾನ ರಚನೆಯಾಗಿದ್ದು ರಾಜರು ಹುಟ್ಟಲು ಅಲ್ಲ. ಜನರ ಧ್ವನಿ ಎತ್ತಿ ಹಿಡಿಯುವ ಜನಪ್ರತಿನಿಧಿಗಳು ಆಯ್ಕೆಯಾಗಲು. ಪ್ರಧಾನಿಯ ಮುಂದೆ ತಲೆತಗ್ಗಿಸಿ ನಿಲ್ಲುವವರನ್ನು ಈಬಾರಿ ಜನ ಗೆಲ್ಲಿಸುವುದಿಲ್ಲ ಎಂದರು.

ಬೌದ್ಧ ಭಿಕ್ಷುಣಿ ಮಾತಾ ಅರ್ಚಸ್ಮತಿ, ಭಂತೆ ಜ್ಞಾನ ಸಾಗರ ಬೀದರ ಸಾನಿಧ್ಯ ವಹಿಸಿದ್ದರು. ಬೌದ್ಧ ಸಮಾಜದ ಅಧ್ಯಕ್ಷ ಟೋಪಣ್ಣ ಕೋಮಟೆ ಅಧ್ಯಕ್ಷತೆ ವಹಿಸಿದ್ದರು. ಡಿವೈಎಸ್ಪಿ ಶಂಕರಗೌಡ ಪಾಟೀಲ, ಕೆಎಸ್ ಡಿಎಸ್ ಎಸ್ ರಾಜ್ಯ ಸಂಚಾಲಕ ಡಾ.ಡಿ.ಜಿ.ಸಾಗರ, ಮುಖಂಡರಾದ ಸೈಯದ್ ಮಹೆಮೂದ್ ಸಾಹೇಬ, ಸಿದ್ದಣ್ಣ ಕಲಶೆಟ್ಟಿ, ಸುರೇಶ ಮೇಂಗನ್, ಸುರೇಶ ಹಾದಿಮನಿ, ರಮೇಶ ಮರಗೋಳ, ಮಲ್ಲೇಶಿ ಸಜ್ಜನ್, ಸುನೀಲ ದೊಡ್ಡಮನಿ, ದೇವಿಂದ್ರ ನಿಂಬರ್ಗಾ, ಮಲ್ಲೇಶಪ್ಪ ಚುಕ್ಕೇರ ಸೇರಿದಂತೆ ಸಾವಿರಾರು ಜನರು ಪಾಲ್ಗೊಂಡಿದ್ದರು.

ವಿಜಯಕುಮಾರ ಸಿಂಗೆ ಸ್ವಾಗತಿಸಿದರು. ಶರಣಬಸು ಸಿರೂರಕರ ಪ್ರಾಸ್ತಾವಿಕ ಮಾತನಾಡಿದರು. ಸಂತೋಷ ಕೋಮಟೆ ನಿರೂಪಿಸಿದರು. ರವಿ ಕೋಳಕೂರ ವಂದಿಸಿದರು. ಶೋಭಾ ನಿಂಬರ್ಗಾ ತಂಡದವರು ಸಂವಿಧಾನ ಪೀಠಿಕೆ ಹಾಡಿದರು. ಸಿದ್ಧಾರ್ಥ ಚಿಮ್ಮಾಯಿದ್ಲಾಯಿ ಭೀಮ ಗೀತೆಗಳನ್ನು ಪ್ರಸ್ತುತಪಡಿಸಿದರು.

## ಸಂಸದ ಶ್ರೀನಿವಾಸ್ ಪ್ರಸಾದ ನಿಧನಕ್ಕೆ ಸಚಿವ ಸತೀಶ್ ಜಾರಕಿಹೊಳಿ ಸಂತಾಪ




ಬೆಳಗಾವಿ: ದಲಿತ ಚಳವಳಿಯ ಹಿರಿಯ ನಾಯಕ, ರಾಜಕಾರಣಿ ವಿ. ಶ್ರೀನಿವಾಸ್ ಪ್ರಸಾದ್ ಅವರ ನಿಧನಕ್ಕೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಸಂತಾಪ ಸೂಚಿಸಿದ್ದಾರೆ.

ಈ ಕುರಿತು ಪ್ರತಿಕಾ ಪ್ರಕಟಣೆಯಲ್ಲಿ ವಿಷಯ ತಿಳಿಸಿದ ಅವರು, ಸ್ನೇಹಿತ, ಸಂಸದರು, ಕರ್ನಾಟಕ ಕಂಡಂತಹ ಶ್ರೇಷ್ಠ ಮುತ್ಸದ್ದಿ ನಾಯಕರಲ್ಲಿ ಒಬ್ಬರಾದ ಶ್ರೀ ಶ್ರೀನಿವಾಸ್ ಪ್ರಸಾದ್ ಅವರ ಅಗಲಿಕೆಯು ಅಪಾರ ನೋವನ್ನುಂಟುಮಾಡಿದೆ.

ಬುದ್ಧ, ಬಸವ, ಅಂಬೇಡ್ಕರ್ ಅವರ ತತ್ವಗಳನ್ನು ಅಳವಡಿಸಿಕೊಂಡು ಶೋಷಿತರ ಏಳಿಗೆಗಾಗಿ ಹಾಗೂ ಅನ್ಯಾಯ, ಅಸಮಾನತೆಯ ವಿರುದ್ಧದ ಹೋರಾಟಕ್ಕೆ ತಮ್ಮ ಬದುಕನ್ನೇ ಮುಡುಪಾಗಿಟ್ಟಿದ್ದ ಶ್ರೀನಿವಾಸ್ ಪ್ರಸಾದ್ ಅವರು ಆದರ್ಶವಾಗಿ ಇದ್ದಂತಹ ನಾಯಕರು. ದೀರ್ಘಕಾಲ ಕಾಂಗ್ರೆಸ್ ಪಕ್ಷದ ಪ್ರಮುಖ ನೇತಾರರಾಗಿ ಕೆಲಸ ಮಾಡಿದ್ದ ಶ್ರೀನಿವಾಸ ಪ್ರಸಾದ್ ಸಚಿವರಾಗಿ ಮತ್ತು ಲೋಕಸಭಾ ಸದಸ್ಯರಾಗಿ ದೀರ್ಘ ಕಾಲ ಜನ ಸೇವೆ ಮಾಡಿದ್ದಾರೆ.

ಅವರೊಬ್ಬ ಪ್ರಗತಿಪರ ಚಿಂತನೆಯ ರಾಜಕೀಯ ನಾಯಕ. ಶ್ರೀನಿವಾಸ್ ಪ್ರಸಾದ್ ಅವರ ನಿಧನದಿಂದ ನಾಡಿಗೆ ತುಂಬಲಾರದ ನಷ್ಟವಾಗಿದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು ಶ್ರೀನಿವಾಸ್ ಪ್ರಸಾಧ್ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

# ನಗರದ ವಿವಿಧ ಭಾಗಗಳಿಗೆ ಚುನಾವಣಾಧಿಕಾರಿ ದಿವ್ಯ ಪ್ರಭು ಭೇಟಿ; ಮತದಾರರಿಗೆ ವೋಟರ್ ಸ್ಲಿಪ್ ಮತ್ತು ಮತದಾನ ದಿನದ ಮಾಹಿತಿ ತಲುಪಿರುವ ಬಗ್ಗೆ ಪರಿಶೀಲನೆ

ಧಾರವಾಡ: ಧಾರವಾಡ ಲೋಕಸಭಾ ಮತಕ್ಷೇತ್ರದ ಸಾರ್ವತ್ರಿಕ ಚುನಾವಣೆಯಲ್ಲಿ ಮತದಾನ ಹೆಚ್ಚಳಕ್ಕೆ ಚುನಾವಣಾ ಆಯೋಗದ ನಿರ್ದೇಶನದಂತೆ ಧಾರವಾಡ ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವೀಪ್ ಸಮಿತಿಯು ವಿವಿಧ ಕಾರ್ಯಗಳ ಮೂಲಕ ನಿರಂತರವಾಗಿ ಪ್ರಯತ್ನಿಸುತ್ತಿದೆ.

ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿಯ ಬಹುತೇಕ ಅಧಿಕಾರಿ, ಸಿಬ್ಬಂದಿಗಳು ಕಳೆದ ಹಲವು ತಿಂಗಳಿಂದ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಚುನಾವಣಾ ಸಿದ್ದತೆಯಲ್ಲಿ ತೊಡಗಿದ್ದಾರೆ.

ಮತಗಟ್ಟೆ ಮಟ್ಟದ ಅಧಿಕಾರಿಗಳು ತಮ್ಮ ಮತಗಟ್ಟೆ ವ್ಯಾಪ್ತಿಯ ಮತದಾರರ ಮನೆಮನೆಗೆ ಹೋಗಿ ಮತದಾರ ವಿವರ ಇರುವ ವೊಟರ್ ಸ್ಲಿಪ್ ವಿತರಿಸುವ ಕಾರ್ಯ ಜಿಲ್ಲೆಯಲ್ಲಿ ಪ್ರಗತಿಯಲ್ಲಿದೆ.

ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಇಂದು ಬೆಳಿಗ್ಗೆ ಧಾರವಾಡ ನಗರದ ಗೊಲ್ಲರ ಕಾಲೋನಿ, ಮೇದಾರ ಓಣಿ ಮುಂತಾದ ಪ್ರದೇಶಗಳಲ್ಲಿ ಮನೆಮನೆಗೆ ಭೇಟಿ ನೀಡಿ, ಮತದಾರರಿಗೆ ವೊಟರ್ ಸ್ಲಿಪ್ ತಲುಪಿರುವ ಬಗ್ಗೆ ಖಚಿತಪಡಿಸಿಕೊಂಡರು.

ಗೊಲ್ಲರ ಓಣಿ ಮತದಾರರಾದ ವಸರವ್ವ ಜಕಾತಿ, ಯಲ್ಲವ್ವ ಉಣಕಲ್ಲ, ತಿಪ್ಪಣ್ಣ ಗೊಲ್ಲರ, ಶಾಂತವ್ವ ದೊಡವಾಡ ಅವರ ಮನೆಗಳಲ್ಲಿನ ವೊಟರ್ ಸ್ಲಿಪ್ ಪರಿಶೀಲಿಸಿ, ಅವರೊಂದಿಗೆ ಮತದಾರ ಗುರುತಿನ ಪತ್ರ, ವೊಟರ್ ಸ್ಲಿಪ್, ಮತಗಟ್ಟೆಗಳಲ್ಲಿನ ಸೌಲಭ್ಯಗಳ ಬಗ್ಗೆ ಮಾಹಿತಿ ಹಂಚಿಕೊಂಡರು. ಯಾವುದೇ ಭಯ, ಆತಂಕಗಳಿಲ್ಲದೆ ಮುಕ್ತವಾಗಿ ಮತಗಟ್ಟೆಗೆ ಬಂದು ಮತ ಚಲಾಯಿಸುವಂತೆ ಅವರು ತಿಳಿಸಿದರು.

ಮತದಾನ ಯಾವಾಗ ಇದೆ ? ಎಂದು ಕೇಳಿದಾಗ ಗೊಲ್ಲರ ಓಣಿಯ 65 ವರ್ಷದ ಅನಕ್ಷರಸ್ಥ ಮಹಿಳೆ, ಯಲ್ಲವ್ವ ಉಣಕಲ್ಲ, ಮೇ 7ನೇ ತಾರೀಖ ಐತರೀ ಮೆಡಮ್ ಅಂದಾಗ, ಜಿಲ್ಲಾಧಿಕಾರಿಗಳು ಖುಷಿಯಿಂದ ಆ ಮಹಿಳೆಯ ಬೆನ್ನುತಟ್ಟಿ, ತಾವೆಲ್ಲರೂ ಅಂದು ಮತಗಟ್ಟೆಗೆ ಬಂದು ಮತದಾನ ಮಾಡಬೇಕು. ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ಎಲ್ಲರೂ ತಪ್ಪದೇ ಚಲಾಯಿಸಬೇಕು ಎಂದರು.

ಜಿಲ್ಲೆಯಲ್ಲಿರುವ 1660 ಮತಗಟ್ಟೆಗಳಲ್ಲಿ ಇರುವ ಪ್ರತಿ ಮತಗಟ್ಟೆ ಮಟ್ಟದ ಅಧಿಕಾರಿಗಳು, ತಮ್ಮ ಮತಗಟ್ಟೆ ವ್ಯಾಪ್ತಿಯ ಪ್ರತಿ ಮನೆಗೆ ಭೇಟಿ ನೀಡಿ, ಪ್ರತಿ ಮತದಾರನಿಗೆ ವೊಟರ್ ಸ್ಲಿಪ್, ಪ್ರತಿ ಕುಟುಂಬಕ್ಕೆ ಮತದಾನ ಮಾಹಿತಿ ಇರುವ ಒಂದು ವೊಟರ್ ಗೈಡ್ ವಿತರಿಸುತ್ತಾರೆ. ಇದು ತಲುಪಿರುವ ಬಗ್ಗೆ ಜಿಲ್ಲಾಧಿಕಾರಿಗಳು ಮಾಹಿತಿ ಪಡೆದುಕೊಂಡರು.

ಮೊದಲ ಬಾರಿಗೆ ಮತ ಚಲಾಯಿಸಲಿರುವ 18 ರಿಂದ 19 ವರ್ಷದೊಳಗಿನ ನವಯುವ ಮತದಾರರಿಗೆ ವೊಟರ್ ಸ್ಲಿಪ್ಪೊಂದಿಗೆ ಜಿಲ್ಲಾ ಚುನಾವಣಾಧಿಕಾರಿಗಳಿಂದ (ಲೇಟರ್ ಹೆಡ್ ಮೇಲೆ) ವಿಶೇಷವಾಗಿ ಶುಭಾಶಯಪತ್ರವನ್ನು ಸಹ ತಲುಪಿಸಲಾಗುತ್ತಿದೆ. ಈ ಕುರಿತು ಪರಿಶೀಲಿಸಿ, ನವ ಮತದಾರರನ್ನು ಮತದಾನಕ್ಕೆ ಬರುವಂತೆ ಪ್ರೇರಣೆ ನೀಡಿದರು.

ಜಿಲ್ಲೆಯಲ್ಲಿ ಶೇ.50 ಕ್ಕಿಂತ ಹೆಚ್ಚು ವೊಟರ್ ಸ್ಲಿಪ್ ವಿತರಣೆ: ಜಿಲ್ಲೆಯಲ್ಲಿ ಬಿಸಿಲು ಪ್ರಮಾಣ ಹೆಚ್ಚಾಗಿರುವದರಿಂದ ಬಿಎಲ್‌ಓಗಳು ಬೆಳಿಗ್ಗೆ ಮತ್ತು ಸಂಜೆ ಸಮಯದಲ್ಲಿ



ಮತದಾರರ ಮನೆಗೆ ಭೇಟಿ ನೀಡಿ, ವೊಟರ್ ಸ್ಲಿಪ್ ನೀಡುತ್ತಿದ್ದಾರೆ. ಮನೆಗೆ ಹೋದಾಗ ಲಭ್ಯರಾಗದ ಮತದಾರರಿಗೆ ಪಕ್ಕದ ಮನೆಯಲ್ಲಿ ಮಾಹಿತಿ ನೀಡಿ, ಬರುತ್ತಾರೆ. ಮರು ದಿನ ಮತ್ತೇ ಅವರ ಮನೆಗೆ ತೆರಳಿ, ಮತದಾನದ ಮಾಹಿತಿ, ವೊಟರ್ ಸ್ಲಿಪ್ ವಿತರಿಸುತ್ತಾರೆ.

ಪರ ಊರು, ಪರಸ್ಥಳಗಳಿಗೆ ತೆರಳಿರುವ ಮತ್ತು ಇತರ ಕಾರಣಗಳಿಂದ ಬಿಎಲ್‌ಓಗಳ ಸಂಪರ್ಕಕ್ಕೆ ಸಿಗದಿರುವ ಮತದಾರರಿಗೆ ಮತದಾನದ ದಿನದಂದು ಮತಗಟ್ಟೆ ವ್ಯಾಪ್ತಿಯ ನೂರು ಮೀಟರ್ ಒಳಗಡೆ ವೊಟರ್ ಹೆಲ್ಪ್‌ಡೆಸ್ಕ ತೆರೆದು, ಮತದಾರರಿಗೆ ವೊಟರ್ ಸ್ಲಿಪ್, ಮತದಾನ ಮಾಡುವ ಬಗ್ಗೆ ಮಾಹಿತಿ ನೀಡುವ ವ್ಯವಸ್ಥೆ ಮಾಡಲಾಗುತ್ತದೆ ಎಂದು ಅವರು ತಿಳಿಸಿದರು.

ಮತದಾರ ಪಟ್ಟಿಯಲ್ಲಿ ನಿಮ್ಮ ಮಾಹಿತಿಯನ್ನು ಪರಿಶೀಲಿಸಿ: ಮತದಾರರು ತಮ್ಮ ಹೆಸರು ಮತದಾರ ಪಟ್ಟಿಯಲ್ಲಿ ಇರುವ ಕುರಿತು ಖುದ್ದು ಪರಿಶೀಲಿಸಬಹುದು. ಮತದಾರ ಸಹಾಯವಾಣಿ 1950 ಗೆ ಕರೆ ಮಾಡಿ, ತಿಳಿಯಬಹುದು. ಹಾಗೂ ತಂಣಜಢಿ.ಜಛಿ.ರಠತ.ಟ ದಲ್ಲಿ ಛಿಜಠ.ಞಚಿಡಿಟಿಚಿಣಚಿಞಚಿ.ರಠತ.ಟ ದಲ್ಲಿಯೂ ಪರಿಶೀಲಿಸಬಹುದು. ಮತದಾರ ತನ್ನ ಮತ ಚಲಾಯಿಸಲು ಸಂಬಂದಪಟ್ಟ ಮತಗಟ್ಟೆಯ ಮತದಾರ ಪಟ್ಟಿಯಲ್ಲಿ ಹೆಸರು ಇರುವುದು ಕಡ್ಡಾಯ. ಮತದಾರ ಪಟ್ಟಿಯಲ್ಲಿ ಹೆಸರು ಇದ್ದರೆ ಮಾತ್ರ ಮತ ಚಲಾಯಿಸಲು ಸಾಧ್ಯವಾಗುತ್ತದೆ. ಇಲ್ಲದಿದ್ದರೆ ಅವಕಾಶ ಸಿಗುವದಿಲ್ಲ ಎಂದು ಅವರು ತಿಳಿಸಿದರು.

ಮತದಾನದ ದಿನವು ಬರೀ ರಜೆ ದಿನವಲ್ಲ; ಅದು ಮತದಾನ ಮಾಡುವ ದಿನ: ನಿಮ್ಮ ಮತ ಚಲಾಯಿಸಲು, ಮತದಾರರ ಪಟ್ಟಿಯಲ್ಲಿ ನಿಮ್ಮ ಹೆಸರು ಇರುವುದು ಅವಶ್ಯವಾಗಿದೆ. ಮತದಾರರ ಪಟ್ಟಿಯಲ್ಲಿ ನಿಮ್ಮ ಹೆಸರನ್ನು ಹುಡುಕಲು ಓಟರ್ ಹೆಲ್ಪ್‌ಲೈನ್ ಆ್ಯಪ್ನ್ನು ಬಳಸಿಬಹುದು. ಮತ ಚಲಾಯಿಸಲು ಅನುಕೂಲವಾಗಲು ಮತದಾರರ ದಿನ ರಜೆ ಘೋಷಿಸಲಾಗುವುದು. ಮತಗಟ್ಟೆಯಲ್ಲಿ ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳನ್ನು ತಗೆದುಕೊಂಡು ಹೊಗುವಂತಿಲ್ಲ. ನಿಮ್ಮ ಮತಗಟ್ಟೆಯನ್ನು ತಂಣಜಢಿ.ಜಛಿ.ರಠತ.ಟ ವೆಬ್ಸೈಟ್ನಲ್ಲಿ ನೋಡಬಹುದು. ಮತದಾರ ಸಹಯವಾಣಿ 1950 ಗೆ ಕರೆ ಮಾಡಿ ಮಾಹಿತಿ ತಿಳಿಯಬಹುದು.

ಮತ ಚಲಾಯಿಸಲು ಯಾವುದಾದರು ಒಂದು ಅನುಮೋದಿತ ಗುರುತಿನ ದಾಖಲೆ, ಗುರುತಿನ ಚೀಟಿಯನ್ನು ಕೊಂಡೊಯ್ಯಿರಿ: ಮತದಾನ ದಿನದಂದು ನಿಮ್ಮ ಸಂಖ್ಯೆ, ಭಾಗ ಸಂಖ್ಯೆ ತಿಳಿಯಲು ವೊಟರ್ ಸ್ಲಿಪ್ ಇರಲಿ. ಇದು ತಮ್ಮ ಮತದಾರ ಪಟ್ಟಿಯಲ್ಲಿ ಅ.ಸಂ., ಭಾಗ ಸಂಖ್ಯೆ, ಮತಗಟ್ಟೆ ವಿಳಾಸದ ಮಾಹಿತಿ ತಿಳಿಯಲು ಸಹಾಯವಾಗುತ್ತದೆ. ಆದರೆ ಇದನ್ನು ಮತಗಟ್ಟೆಯಲ್ಲಿ ಮತದಾನಕ್ಕೆ ಅಗತ್ಯವಾದ ಗುರುತಿನ ದಾಖಲಾತಿ ಪರಿಗಣಿಸುವದಿಲ್ಲ. ಮತದಾನಕ್ಕೆ ಮತದಾರನ ಗುರುತಿನ ಚೀಟಿ (ಇಕಖಅ) ಇರಬೇಕು. ಇಲ್ಲದಿದ್ದಲ್ಲಿ ಭಾರತ ಚುನಾವಣಾ ಆಯೋಗವು ಗೆಜೆಟ್ ಮಾಡಿರುವ 12 ದಾಖಲಾತಿಗಳಾದ ಭಾವಚಿತ್ರವಿರುವ ಆದಾರ್ ಕಾರ್ಡ, ಭಾವಚಿತ್ರವಿರುವ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಗುರುತಿನ ಚೀಟಿ, ಭಾವಚಿತ್ರವುಳ್ಳ ಬ್ಯಾಂಕ್ ಅಥವಾ ಅಂಚೆ ಕಛೇರಿಯ ಪಾಸ್ ಪುಸ್ತಕ, ಆರೋಗ್ಯ ವಿಮಾ ಸ್ಮಾರ್ಟ್ ಕಾರ್ಡ್ (ಕಾರ್ಮಿಕ ಇಲಾಖೆ), ಚಾಲನಾ ಪರವಾನಿಗೆ, ಪ್ಯಾನ್ ಕಾರ್ಡ, ಎನ್.ಪಿ.ಆರ್ ಅಡಿಯಲ್ಲಿ ಆರ್ಜಿ.ಐ ವಿತರಿಸಿರುವ ಸ್ಮಾರ್ಟ್ ಕಾರ್ಡ, ಭಾರತೀಯ ಪಾಸ್ಪೋರ್ಟ, ಭಾವಚಿತ್ರವಿರುವ ಪಿಂಚಣಿ ದಾಖಲೆ, ರಾಜ್ಯ, ಕೇಂದ್ರ, ಕೇಂದ್ರಾಡಳಿತ, ಪಿಎಸ್ ಯು, ಪಬ್ಲಿಕ್ ಲಿಮಿಟೆಡ್ ಕಂಪನಿಗಳು ನೀಡಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ, ಸಂಸದರು–ಶಾಸಕರು–ವಿಧಾನ ಪರಿಷತ್ ಸದಸ್ಯರಿಗೆ ನೀಡಿರುವ ಅಧಿಕೃತ ಗುರುತಿನ ಚೀಟಿ ಹಾಗೂ ಭಾರತ ಸರಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ನೀಡಿರುವ ವಿಶೇಷಚೇತನರ ಯುನಿಕ್ ಡಿಸೆಬಲಿಟಿ(ಯುಡಿಐಡಿ) ಗುರುತಿನ ಚೀಟಿ, ಇವುಗಳಲ್ಲಿ ಒಂದನ್ನು ತೋರಿಸಿ ಮತ ಚಲಾಯಿಸಬಹುದು ಎಂದು ಅವರು ಹೇಳಿದರು.

ಮತದಾನ ಕೆಂದ್ರಗಳ ಮೂಲಭೂತ ಸೌಲಭ್ಯಗಳು: ವಿಶೇಷಚೇತನರು ಹಾಗೂ ಹಿರಿಯ ನಾಗರೀಕರಿಗೆ ಇಳಿಜಾರು ಹಾಗೂ ಗಾಲಿ ಕುರ್ಚಿ ನೀಡಲಾಗುತ್ತದೆ. ವಿಶೇಷ ಚೇತನರು ಹಾಗೂ ಹಿರಿಯ ನಾಗರೀಕರಿಗೆ ಆದ್ಯತೆಯ ಪ್ರವೇಶ, ಮೊದಲಿಗೆ ಮಾಹಿತಿ ನೀಡಿರುವ ವಿಶೇಷಚೇತನ ಮತದಾರರಿಗೆ ಸಾರಿಗೆ ವ್ಯವಸ್ಥೆಯನ್ನು ಮಾಡಲಾಗುವುದು.

ಮತದಾರರು ತಮ್ಮ ಮಾಹಿತಿಯನ್ನು ತಂಣಜಢಿ.ಜಛಿ.ರಠತ.ಟ ನಲ್ಲಿ ಪರಿಶೀಲಿಸಬಹುದು ಎಂದು ಚುನಾವಣಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಮತದಾರ ಮನೆ ಭೇಟಿ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ಸಹಾಯಕ ಮತದಾರ ನೋಂದಣಿ ಅಧಿಕಾರಿ ಆಗಿರುವ ತಹಸಿಲ್ದಾರ ಡಾ.ಡಿ.ಎಚ್.ಹೂಗಾರ, ಗ್ರಾಮ ಆಡಳಿತ ಅಧಿಕಾರಿ ಕರಿಯಪ್ಪ ಗುಡ್ಡದ, ಮತಗಟ್ಟೆ ಮಟ್ಟದ ಅಧಿಕಾರಿಗಳಾದ ನಿರ್ಮಲಾ ಲಕ್ಕುಂಡಿ, ದ್ರಾಕ್ಷಾಯಣಿ ಹಡಗಲಿ, ಉಮಾ ಮುಳ್ಳಮ್ಮ ಸೇರಿದಂತೆ ಇತರರು ಇದ್ದರು.

# ವಿ.ಶ್ರೀನಿವಾಸ ಪ್ರಸಾದ ನಿಧನಕ್ಕೆ ಡಾ.ಪ್ರಭಾಕರ ಕೋರೆ ಕಂಬನಿ



ಬೆಳಗಾವಿ: ಹಿರಿಯ ರಾಜಕೀಯ ಮುತ್ಸದಿ, ಮಾಜಿ ಸಚಿವ, ಹಾಲಿ ಸಂಸದ ವಿ. ಶ್ರೀನಿವಾಸ ಪ್ರಸಾದ ಅವರ ಅಗಲಿಕೆ ಸಮಾಜಕ್ಕೆ ಹಾಗೂ ನಾಡಿಗೆ ತುಂಬಲಾರದ ದುಃಖವನ್ನುಂಟುಮಾಡಿದೆ ಎಂದು ಕೆ-ಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ.ಪ್ರಭಾಕರ ಕೋರೆಯವರು ಕಂಬನಿ ಮಿಡಿದಿದ್ದಾರೆ.

ನಾನು ರಾಜ್ಯಸಭಾ ಸದಸ್ಯರಾಗಿದ್ದಾಗ ಅವರೊಂದಿಗೆ ಜೊತೆಯಾಗಿ ಕೆಲಸವನ್ನು ಮಾಡಿದ್ದೇನೆ. ಒಬ್ಬ ನಿಷ್ಠಾವಂತ ಸಂಸದರಾಗಿ ಪ್ರಮಾಣಿಕವಾಗಿ ಕೆಲಸವನ್ನು ಮಾಡಿದವರು ಶ್ರೀನಿವಾಸ ಪ್ರಸಾದ. ನಯವಿನಯತೆ ಹಾಗೂ ಮುಗ್ಧತೆ ಅವರ ಹೃದಯದಲ್ಲಿ ಮನೆಮಾಡಿತ್ತು. ಒಬ್ಬ ಒಳ್ಳೆಯ ಆಡಳಿತಗಾರರಾಗಿದ್ದ ಅವರು ರಾಜಶೇಖರಮೂರ್ತಿಯವರ ಪ್ರೀತಿಯ ಶಿಷ್ಯರಾಗಿ ರಾಜಕೀಯದಲ್ಲಿ ಸಾಕಷ್ಟು ಪಳಗಿದ್ದರು.

ಸುದೀರ್ಘ ಐವತ್ತು ವರ್ಷಗಳ ರಾಜಕೀಯ ಜೀವನದಲ್ಲಿ ಅಚ್ಚಳಿಯದ ಕೆಲಸಗಳನ್ನು ಮಾಡಿದರು. ತಮ್ಮ ಕ್ಷೇತ್ರದ ಪ್ರಗತಿಯಲ್ಲಿ ಸಾಕಷ್ಟು ಶ್ರಮಿಸಿದರು.

ಒಬ್ಬ ಸ್ನೇಹಜೀವಿ, ಸರಳಜೀವಿ ಹಾಗೂ ಎಲ್ಲಕ್ಕೂ ಮುಖ್ಯವಾಗಿ ಭಾರತೀಯ ಜನತಾ ಪಕ್ಷವನ್ನು ತಳಮಟ್ಟದಲ್ಲಿ ಕಟ್ಟುವಲ್ಲಿ ಶ್ರಮಿಸಿದ್ದ ಅವರು ಇಂದಿನ ಜನಪ್ರತಿನಿಧಿಗಳಿಗೆ ಮಾದರಿಯಾಗಿದ್ದಾರೆ. ಅವರ ಸಾವು ನನಗೆ ತುಂಬ ನೋವು ತಂದಿದೆ.

ಭಗವಂತನು ಅವರ ದಿವ್ಯಾತ್ಮಕ್ಕೆ ಶಾಂತಿಯನ್ನು ನೀಡಲಿ ಅವರ ಅಗಲಿಕೆಯ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಕರುಣಿಸಲೆಂದು, ಭಾವಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಿದ್ದಾರೆ.

# ಜಿಲ್ಲಾ ಗಾಣಿಗ ಸಮುದಾಯದ ಸಂಪೂರ್ಣ ಬೆಂಬಲ ಪಡೆದ ಜಗದೀಶ್ ಶೆಟ್ಟರ್

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ಹೆಚ್ಚು ಉತ್ಪಾದಕ, ಐಟಿ ಉದ್ದಿಮಗಳನ್ನು ತಂದು, ಹುಬ್ಬಳ್ಳಿ ಮಾದರಿಯಲ್ಲೇ ಬೆಳಗಾವಿ ಜಿಲ್ಲೆಯನ್ನು ಸಮಗ್ರ ಅಭಿವೃದ್ಧಿಯ ಕ್ಷೇತ್ರ ಮಾಡುತ್ತೇನೆ ಎಂದು ಬಿಜೆಪಿ ಅಭ್ಯರ್ಥಿ ಜಗದೀಶ್ವ ಶೆಟ್ಟರ್ ಅವರು ಹೇಳಿದ್ದಾರೆ.




ಲೋಕಸಭಾ ಚುನಾವಣೆ ಪ್ರಚಾರಾರ್ಥವಾಗಿ ಬೆಳಗಾವಿಯ ಖಡೆಬಜಾರ್ ನ ಎಂ.ಜಿ. ಟಾವರ್ ಹತ್ತಿರ ಗಾಣಿಗೇರ ಸಮಾಜದ ಅಭಿವೃದ್ಧಿ ಸಂಘದಲ್ಲಿ "ಗಾಣಗೇರ ಸಮಾಜದ ಬಂಧುಗಳೊಂದಿಗೆ ಸಭೆ ನಡೆಸಿ, ಮತಯಾಚನೆ ಮಾಡಲಾಯಿತು. ಈ ವೇಳೆ ಮಾತನಾಡಿದ ಬೆಳಗಾವಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು, ಮೋದಿಯವರು ದೇಶ ಅಲ್ಲಾ ವಿಶ್ವ ಕಂಡ ಮಹಾ ನಾಯಕ, ಕಳೆದ ಹತ್ತು ವರ್ಷದಲ್ಲಿ ಭಾರತವನ್ನು ವಿಶ್ವ ಮಟ್ಟದಲ್ಲಿ ಉನ್ನತ ಸ್ಥಾನದಲ್ಲಿ ನಿಲ್ಲುವಂತೆ ಪ್ರಧಾನಿ ಮೋದಿಯವರು ಮಾಡಿದ್ದಾರೆ. ದೇಶದ ಭದ್ರತೆ, ಆರ್ಥಿಕ ಪ್ರಗತಿ, ಭ್ರಷ್ಟ ಮುಕ್ತ ಆಡಳಿತ, ವಿವಿಧ ಕ್ಷೇತ್ರಗಳಲ್ಲಿ ಅಭಿವೃದ್ಧಿ ಯೋಜನೆಗಳು, ಅವುಗಳನ್ನು ಕಾರ್ಯರೂಪಕ್ಕೆ ತಂದು ಇಂದು ಭಾರತ ದೇಶವನ್ನು ಬಲಿಷ್ಠ ಮಾಡಿದ್ದು ಇಡೀ ಭಾರತೀಯರು ಹೆಮ್ಮೆ ಪಡೆಬೇಕು ಎಂದು ಹೇಳಿದರು.

ಇನ್ನು ದೇಶ, ಧರ್ಮ, ಸಂಸ್ಕೃತಿ ವಿಚಾರವಾಗಿ ದೇಶ ಕಾಯುವ ಯೋಧನಾಗಿ ಕೆಲಸ ಮಾಡಿದ್ದು, ದೇಶವಾಸಿಗಳ ನೂರಾರು ವರ್ಷದ ಕನಸಾದ ರಾಮ ಮಂದಿರದ ನಿರ್ಮಾಣ, ಬಹುಸಂಖ್ಯಾತರ ರಕ್ಷಣೆ, ಸಾಮಾಜಿ-ಕ, ಧಾರ್ಮಿಕ ಭದ್ರತೆ ನೀಡಿ, ಅನ್ಯ-ರಿಂದ ಆಗುತ್ತಿರುವ ತೊಂದರೆಗಳನ್ನು ತಡೆಹಿಡಿದಿದ್ದು ನಮ್ಮ ಪ್ರಧಾನಿ ಮೋದಿ.

ನಮ್ಮ ದೇಶದ ಧೀಮಂತ ಪ್ರಧಾನಿಯವರೂ ಕೂಡಾ ಹಿಂದುಳಿದ ಸಮುದಾಯಕ್ಕೆ ಸೇರಿದ್ದು, ಎಲ್ಲಿಯೂ ಕೂಡಾ ತಾವು ಹಿಂದುಳಿದವರು ಎಂದು ಸೀಮಿತವಾಗಲಿಲ್ಲ, ದೇಶದ ಎಲ್ಲಾ ಜನರ ಅಭಿವೃದ್ಧಿಗಾಗಿ, ದೇಶದ ಸೇವಕನಾಗಿ ದುಡಿದಿದ್ದಾರೆ.

ಆಸ್ತಿ ಸಂಪತ್ತು ಮಾಡಲು ಅವ-ರಿಗೆ ಮನೆ, ಮಕ್ಕಳು, ಸಂಬಂಧಗಳು ಇಲ್ಲ. ದೇಶವೇ ಅವರ ಮನೆ ದೇಶದ ಪ್ರಜೆಗಳೇ ಅವರ ಬಂಧುಗಳು, ದೇಶದ ಉದ್ಧಾರವೇ ಮೋದಿಜೀ ಅವರ ಕನಸಾಗಿದ್ದು ಅಂತಹ ನಾಯಕರು ನಮ್ಮ ದೇಶಕ್ಕೆ ದೊರಕಿದ್ದು ಭಾರತೀಯರ ಭಾಗ್ಯ ಎಂದು ತಿಳಿಸಿದರು.

ಜನಪ್ರತಿನಿಧಿಯಾಗಿ ಹುಬ್ಬಳ್ಳಿಯನ್ನು ಎಲ್ಲಾ ರೀತಿಯಲ್ಲಿಯೂ ಅಭಿವೃದ್ಧಿ ಮಾಡಿದ್ದೇನೆ. ಅದಕ್ಕಿಂತ ಹೆಚ್ಚಿನ ರೀತಿಯಲ್ಲಿ ಬೆಳಗಾವಿಯನ್ನು ಅಭಿವೃದ್ಧಿ ಮಾಡುವೆ ಎಂದು ಪ್ರಮಾಣ ಮಾಡುತ್ತೇನೆ.

ಈಗಾಗಲೇ ದಿ. ಸುರೇಶ್ ಅಂಗಡಿ ಹಾಗೂ ಮಂಗಳ ಅಂಗಡಿ ಅವರ ಅವಧಿಯಲ್ಲಿ ರೈಲ್ವೆ ಹಾಗೂ ವೈಮಾನಿಕ ವಲಯಗಳಲ್ಲಿ ಸಾಕಷ್ಟು ಪ್ರಗತಿ ಆಗಿದ್ದು, ಮುಂದೆ ಇಲ್ಲಿ ವಿವಿಧ ಉತ್ಪಾದಕ ವಿದೇಶಿ ಕಂಪನಿಗಳನ್ನು, ಐಟಿ ಉದ್ದಿಮೆಗಳನ್ನು ತಂದು, ಉದ್ಯೋಗ ಸೃಷ್ಟಿಸಿ, ಜಿಲ್ಲೆಯನ್ನು ಅಭಿವೃದ್ಧಿ ದೃಷ್ಟಿಯಲ್ಲಿ ಮಾದರಿ ಜಿಲ್ಲೆಯಾಗಿ ಮಾಡುತ್ತೇನೆ ಎಂದರು.

ಈ ಸಂದರ್ಭದಲ್ಲಿ ಸಂಸದೆ ಮಂಗಲ ಸುರೇಶ ಅಂಗಡಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಅನಿಲ ಬೆನಕೆ, ಪ್ರಮುಖರಾದ ಪ್ರಕಾಶ ಬಾಳೇಕುಂದ್ರಿ, ಶಂಕರಗೌಡ ಪಾಟೀಲ, ಜಿ.ಎಸ್. ಭಬ್ಬಿ ಹಾಗೂ ಇತರರು ಉಪಸ್ಥಿತರಿದ್ದರು.

# ಬೇಸಿಗೆ ಯೋಗ ಶಿಬಿರ




ಬೆಳಗಾವಿ: ಬಾಲ್ಯದಲ್ಲಿ ಪುರಾತನ ಆಯುರ್ವೇದ, ಯೋಗಗಳ ಮೂಲಕ ಆರೋಗ್ಯಕರವಾದ ಜೀವನ ಶೈಲಿ ಅಳವಡಿಸಿ ಕೊಳ್ಳುವ ಮೂಲಕ ಮನೋದೈಹಿಕ ಆರೋಗ್ಯವನ್ನು ಕಾಪಾಡಿ ಕೊಳ್ಳುವುದು ವಿದ್ಯಾರ್ಥಿ ಜೀವನದ ಅತ್ಯಂತ ಮಹತ್ವದ ಮೈಲಿಗಲ್ಲು ಎಂದು ಕೆ.ಎಲ್.ಇ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರಾದ ಹಾಗೂ ಪ್ರಾಚಾರ್ಯರಾದ ಡಾ.ಕಿರಣ-ಕುಮಾರ ಮುತ್ನಾಳಿ ಹೇಳಿದರು.

ಅವರು ಸ್ಥಳೀಯ ಕೆ.ಎಲ್. ಇ ಆಯುರ್ವೇದ ವೈದ್ಯಕೀಯ ಮಹಾ ವಿದ್ಯಾಲಯದ ಸ್ವಸ್ಥವೃತ್ತ, ಯೋಗ ಹಾಗೂ ಬಾಲ ರೋಗ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿರುವ 7 ದಿನಗಳ ಬೇಸಿಗೆ ಯೋಗ ಶಿಬಿರವನ್ನು ಉದ್ಘಾಟಿಸಿ ಮಾತನಾಡುತ್ತಾ ಸ್ಥಳೀಯ ಮಕ್ಕಳ ಬೇಸಿಗೆ ರಜೆಯನ್ನು ಸಮರ್ಪಕವಾಗಿ ಬಳಕೆ ಮಾಡುವ ಉದ್ದೇಶದಿಂದ ಯೋಗ ಶಿಬಿರವನ್ನು ಆಯೋಜಿಸಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆಯಲು ವಿನಂತಿಸಿದರು.

6–13 ವರ್ಷದಮಕ್ಕಳಿಗಾಗಿ ಆಯೋಜಿಸಿರುವ 7 ದಿನದಗಳ ಬೇಸಿಗೆ ಯೋಗ ಶಿಬಿರದಲ್ಲಿ ಯೋಗಾಭ್ಯಾಸ, ಆಟಗಳು, ವೇದ ಮಂತ್ರ ಪಠಣ, ಆರೋಗ್ಯ ತಪಾಸಣೆ, ಆರೋಗ್ಯಕರಆಹಾರ, ಜೀವನಶೈಲಿ ಕುರಿತು ಮಾಹಿತಿಕೊಡಲಾಗುವುದು.

ಕಾರ್ಯಕ್ರಮದಲ್ಲಿ ಡಾ.ಸಂತೋಷ ಶಿವಣ್ಣವರ ಸಹಪ್ರಾಧ್ಯಾಪಕರು ಸ್ವಸ್ಥವೃತ್ತ ಹಾಗೂ ಯೋಗ ವಿಭಾಗ, ಡಾ.ರಮೇಶ್ ಹಾಲಳ್ಳಿ ಸಹಾಯಕ ಪ್ರಾಧ್ಯಾಪಕರು ಬಾಲ ರೋಗ ವಿಭಾಗ, ಶ್ರೀ ಮಲ್ಲಿಕಾರ್ಜುನ ಬಚಡಿ ಯೋಗ ತರಬೇತಿದಾರರು ಶಿಕ್ಷಕರು ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

# ಪತ್ನಿಯನ್ನು ಕೊಲೆಗೈದ ಪಾಪಿಪತಿ



ಚಿಕ್ಕಮಗಳೂರು: ಗಂಡನಿಂದಲೇ ಹೆಂಡತಿಯ ಬರ್ಬರ ಹತ್ಯೆ ಆರೋಪ. ನಾಲೆಯಲ್ಲಿ ಬಟ್ಟೆ ತೊಳೆಯುತ್ತಿದ್ದಾಗ ಕೊಚ್ಚಿ ಕೊಲೆ ಮಾಡಿದ ಘಟನೆ ತರೀಕೆರೆ ತಾಲೂಕಿನ ಕರಕುಚ್ಚಿ ಗ್ರಾಮದಲ್ಲಿ ಬೆಳಕಿಗೆ ಬಂದಿದೆ. ಮೇಘನಾ (20), ಕೊಲೆಯಾದ ದುರ್ದೈವಿ ಎಂದು ಗುರುತಿಸಲಾಗಿದೆ.

ಮೇಘನಾಳನ್ನು ಪತಿ ಚರಣ್ ಕೊಲೆ ಗೈದಿದ್ದಾನೆ ಎಂಬ ಆರೋಪ ಕೇಳಿಬಂದಿದೆ. ಹಾಡ ಹಗಲೇ ಪತ್ನಿಯನ್ನು ಕೊಂದು ಗಂಡ ಪರಾರಿಯಾಗಿದ್ದಾನೆ. ಮೇಘನಾ ಮೂರು ವರ್ಷಗಳಿಂದ ಗಂಡ ಚರಣ್ನಿಂದ ದೂರವಾಗಿದ್ದಳು. ಶಂಕರಘಟ್ಟ ಗ್ರಾಮದ ಅಜ್ಜಿ ಮನೆಯಲ್ಲಿ ವಾಸವಿದ್ದಳು. ನಿನ್ನೆ ತಾಯಿ ಮನೆ ಕರಗುಚಿ ಗ್ರಾಮಕ್ಕೆ ಬಂದಿದ್ದಳು.

ಗಂಡನ ವಿಪರೀತ ಕಿರುಕುಳಕ್ಕೆ ಬೇಸತ್ತು ದೂರವಾಗಿದ್ದ ಮೇಘನಾ ಪತಿಯಿಂದ ದೂರವಾಗಿದ್ದಳು. ಪತ್ನಿ ಬಟ್ಟೆ ತೊಳೆಯಲು ಹೋಗಿದ್ದಾಗ ಆಕೆಯ ಕೊಲೆಗೆ ಸ್ಕೆಚ್ ಹಾಕಲಾಗಿದೆ ಎನ್ನಲಾಗುತ್ತಿದೆ. ಸ್ಥಳಕ್ಕೆ ಲಕ್ಕವಳ್ಳಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.



# ಪ್ರಜ್ವಲ್ ರೇವಣ್ಣ ಅಶ್ಲೀಲ ವೀಡಿಯೋ ಪ್ರಕರಣ: ಸಮಗ್ರ ತನಿಖೆಗೆ ಎಸ್‌ಐಟಿ ರಚನೆ

ಬೆಂಗಳೂರು: ಪ್ರಜ್ವಲ್ ರೇವಣ್ಣ ಅವರ ಅಶ್ಲೀಲ ವೀಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲು ವಿಶೇಷ ತನಿಖಾ ತಂಡ ರಚಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಅಶ್ಲೀಲ ವೀಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಪ್ರತಿಕ್ರಿಯೆ ನೀಡಿದ ಮರುದಿನವೇ ಈ ಬೆಳವಣಿಗೆ ನಡೆದಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲು ಬೆಂಗಳೂ-ರಿನ ಎಡಿಜಿಪಿ ಬಿಜಯಕುಮಾರ್ ಸಿಂಗ್, ಸಹಾಯಕ ಪೊಲೀಸ್ ಮಹಾ ನಿರೀಕ್ಷಕರಾದ ಸುಮನ್ ಡಿ. ಪನ್ನೇಕರ್ ಹಾಗೂ ಮೈಸೂರು ಎಸ್ಪಿ ಸೀಮಾ ಲಾಟ್ಕರ್ ಅವರನ್ನೊಳಗೊಂಡ ತಂಡವನ್ನು ರಚಿಸಿದೆ. ಬಿಜಯ ಕುಮಾರ್ ಸಿಂಗ್ ತಂಡದ ಮುಖ್ಯಸ್ಥರಾಗಿರುತ್ತಾರೆ ಎಂದು ಸರ್ಕಾರದ ಅಧೀನ ಕಾರ್ಯದರ್ಶಿ ಎಸ್. ಅಂಬಿಕಾ ಆದೇಶ ಪ್ರತಿಯಲ್ಲಿ ತಿಳಿಸಿದ್ದಾರೆ.

ಆದೇಶ ಪ್ರತಿಯಲ್ಲಿ ಏನಿದೆ? ಹಾಸನ ಜಿಲ್ಲೆಯಲ್ಲಿ ಮಹಿಳೆಯರ ಮೇಲೆ ನಡೆಸಲಾಗುತ್ತಿರುವ ಲೈಂಗಿಕ ಹಿಂಸೆಯ ಖಾಸಗಿ ವೀಡಿಯೋಗಳು ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿವೆ. ಅಲ್ಲದೇ ಪ್ರಭಾವಿ ರಾಜಕಾರಣಿಗಳು ಅನೇಕ ಮಹಿಳೆಯರನ್ನು ಲೈಂಗಿಕವಾಗಿ ಬಳಸಿಕೊಳ್ಳುತ್ತಿದ್ದಾರೆ ಎಂಬ ಆರೋಪಗಳು ಕೇಳಿಬಂದಿವೆ.

ಈ ಹಿನ್ನೆಲೆಯಲ್ಲಿ ವೀಡಿಯೋ ಚಿತ್ರೀಕರಣ ಮಾಡಿದ ವ್ಯಕ್ತಿಗಳು ಮತ್ತು ಅದನ್ನು ಸಾರ್ವಜನಿಕವಾಗಿ ಹರಿಬಿಟ್ಟ ವ್ಯಕ್ತಿಗಳನ್ನು ಪತ್ತೆ ಹಚ್ಚಿ ತನಿಖೆಗೆ ಒಳಪಡಿಸುವುದು ಮತ್ತು ಮಹಿಳೆಯರ ಘನತೆ ಹಾಗೂ ಅಸ್ತಿತ್ವಕ್ಕೆ ಹಾನಿ ಉಂಟು ಮಾಡುತ್ತಿರುವವರನ್ನು ಶೀಘ್ರವಾಗಿ ಪತ್ತೆಹಚ್ಚಲು ವಿಶೇಷ ತನಿಖಾ ತಂಡ ರಚಿಸಲಾಗಿದೆ.

ವಿಶೇಷ ತನಿಖಾ ತಂಡವು ರಾಜ್ಯದ ಇತರೇ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಮತ್ತು ದಾಖಲಾಗಬಹುದಾದ ಪ್ರಕರಣಗಳನ್ನು ಎಸ್‌ಐಟಿಗೆ ವರ್ಗಾಯಿಸಬೇಕು. ಎಸ್‌ಐಟಿಗೆ ತನಿಖೆ ನಡೆಸಲು ಇತರೇ ಸದಸ್ಯರ ಅವಶ್ಯಕತೆಯಿದ್ದಲ್ಲಿ ಡಿಜಿ ಮತ್ತು ಐಜಿಪಿ ಅವರ ಅನುಮೋದನೆಯೊಂದಿಗೆ ತನಿಖಾ ತಂಡಕ್ಕೆ ಸೇರಿಸಿಕೊಳ್ಳಬಹುದು. ಅಲ್ಲದೇ ವಿಶೇಷ ತನಿಖಾ ತಂಡವು ಸಿಐಡಿಯಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಸಮಗ್ರ ತನಿಖೆ ನಡೆಸಬೇಕು. ತನಿಖಾ ವರದಿಯನ್ನು ಪೊಲೀಸ್ ಮಹಾನಿರ್ದೇಶಕರ ಮೂಲಕ ಸರ್ಕಾರಕ್ಕೆ ಸಲ್ಲಿಸಬೇಕು ಎಂದು ಆದೇಶದಲ್ಲಿ ತಿಳಿಸಿದೆ. ಆದ್ರೆ ತನಿಖಾ ವರದಿಯಲ್ಲಿ ಸಲ್ಲಿಸಲು ಡೆಡ್‌ಲೈನ್ ಫಿಕ್ಸ್ ಮಾಡಿಲ್ಲ

ಸಂತ್ರಸ್ತೆಯಿಂದ ಪ್ರಜ್ವಲ್ ವಿರುದ್ಧ ದೂರು: ಅಶ್ಲೀಲ ವೀಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಹೊಳೆನರಸಿಪುರ ಟೌನ್ ಪೊಲೀಸ್ ಠಾಣೆಯಲ್ಲಿ ಹಾಸನ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ವಿರುದ್ಧ ಸಂತ್ರಸ್ತೆಯಿಂದ

ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಐಪಿಸಿ ಸೆಕ್ಷನ್ 354 (ಎ) ಲೈಂಗಿಕ ಕಿರುಕುಳ, 354 (ಡಿ) (ಮಹಿಳೆಗೆ ಮುಜುಗರ ಆಗುವಂತೆ ಹಿಂಬಾಲಿಸುವುದು), 506 (ಬೆದರಿಕೆ), 509 (ಮಹಿಳೆ ಮಾನಕ್ಕೆ ಹಾನಿ ಉಂಟುಮಾಡುವುದು) ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಈ ಪ್ರಕರಣದ ಸಮಗ್ರ ತನಿಖೆಯನ್ನೂ ನಿರ್ವಹಿಸುವಂತೆ ಎಸ್‌ಐಟಿಗೆ ಆದೇಶಿಸಿದೆ.

# ಪ್ಯಾಸ್ ಫೌಂಡೇಶನ್‌ದಿಂದ ಗಜಪತಿ ಗ್ರಾಮದಲ್ಲಿ ಕೆರೆಯ ಪುನರುಜ್ಜೀವನ

ಬೆಳಗಾವಿಯ ಪ್ಯಾಸ್ ಫೌಂಡೇಶನ್ ಕಳೆದ ಹಲವಾರು ವರ್ಷಗಳಿಂದ ಬೆಳಗಾವಿಯ ಸುತ್ತಮುತ್ತಲು ನೀರಿನ ಭವಣೆಯಲ್ಲಿ ನೀಗಿಸುವಲ್ಲಿ ಮಹತ್ತರ ಸೇವೆಯನ್ನು ಸಲ್ಲಿಸುತ್ತಾ ಬಂದಿದೆ. ಬರಗಾಲದಿಂದ ಕುಡಿಯುವ ನೀರಿನ ಹಾಹಾಕಾರದಿಂದ ಬಸವಳಿದಿರುವ ಜನತೆಗೆ ಗ್ರಾಮಸ್ಥರಿಗೆ ನೀರನ್ನು ಪೂರೈಸುವ ಹಾಗೂ ಕೆರೆ ಭಾವಿಗಳನ್ನು ಜೀರ್ಣೋದ್ಧಾರ ಮಾಡುವ ಕಾರ್ಯದಲ್ಲಿ ಹಗಲಿರುಳು ಶ್ರಮಿಸುತ್ತಿದೆ.



ಬೆಳಗಾವಿ ನಗರದಿಂದ 28 ಕಿಮೀ ದೂರದಲ್ಲಿರುವ ಬೆಳಗಾವಿ ತಾಲೂಕಿನ ಗಜಪತಿ ಗ್ರಾಮದಲ್ಲಿ ಕೆರೆಯ ಪುನಶ್ಚೇತನದ ಕೆಲಸವನ್ನು ಪ್ರಾರಂಭಿಸಿದೆ. ಪ್ಯಾಸ್ ಫೌಂಡೇಶನ್‌ದ ಈ ವರ್ಷದ ಮೂರನೇ ಯೋಜನೆಯಾಗಿರುವ ಗಜಪತಿ ಗ್ರಾಮವು ಸುಮಾರು 2600 ಜನಸಂಖ್ಯೆಯನ್ನು ಹಾಗೂ ಸುಮಾರು 500 ಜಾನುವಾರುಗಳನ್ನು ಹೊಂದಿದೆ. ಈಗಿರುವ ಕೆರೆಯ ಆಳದಲ್ಲಿ ನೀರು ನಿಲ್ಲದ ಕಾರಣ ಬೇಸಿಗೆಯಲ್ಲಿ ಕೆರೆ ಬತ್ತಿ ಹೋಗಿತ್ತು.

PYAAS ಫೌಂಡೇಶನ್ 6.4 ಎಕರೆ ವಿಸ್ತೀರ್ಣದ ಕೆರೆಯನ್ನು 6 ಅಡಿಗಳಷ್ಟು ಆಳವನ್ನು ಹೆಚ್ಚಿಸುವ ಮೂಲಕ ಪುನರುಜ್ಜೀವನಗೊಳಿಸುತ್ತಿದೆ. ಕೆರೆಯ ಸುತ್ತಲಿನ ಆವರಣವನ್ನು ಬಲಪಡಿಸುತ್ತಿದೆ. ಜೂನ್ ಮೊದಲ ವಾರದೊಳಗೆ ಯೋಜನೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ ಎಂದು ತಿಳಿಸಿದೆ.

ಯೋಜನೆಯು ಈ ಪ್ರದೇಶದಲ್ಲಿ ಸಂಪೂರ್ಣ ಮಳೆ ನೀರನ್ನು ಕೊಯ್ಲು ಮಾಡುವ ಗುರಿಯನ್ನು ಹೊಂದಿದೆ, ಹೀಗಾಗಿ ಇದರಿಂದ ಅಂತರ್ಜಲವನ್ನು ಹೆಚ್ಚಿಸಲು ಸಾಧ್ಯ ಮತ್ತು ಸುತ್ತಮುತ್ತಲಿನ ಬಾವಿಗಳು ಮತ್ತು ಬೋರ್‌ವೆಲ್‌ಗಳಲ್ಲಿ ನೀರಿನ ಮಟ್ಟಕ್ಕೆ ಗಮನಾರ್ಹ ಏರಿಕೆಯಾಗುತ್ತಿದೆ ಎಂದು ತಿಳಿಸಿದೆ.

ಜಿನಬಕುಲ್ ಫೋರ್ಜ್ ಮೂಲಕ ಈ ಯೋಜನೆಯಲ್ಲಿ ಪ್ಯಾಸ್‌ನ ಸಿಎಸ್‌ಆರ್ ಪಾಲುದಾರರಾದ ಶ್ರೀ ಕಿರಣ ಜಿನಗೌಡ ಮತ್ತು ಶ್ರೀ ಬಾಲಚಂದ್ರ ಬದನ್ ಅವರು ಕೆರೆಯ ಸ್ಥಳದಲ್ಲಿ ಪೂಜೆಯನ್ನು ನೆರವೇರಿಸಿದರು.

ಟೀಮ್ ಪಯಾಸ್‌ನ ಪದಾಧಿಕಾ-ರಿಗಳಾದ ಡಾ ಪ್ರೀತಿ ಕೋರೆ, ಶ್ರೀ ಅವಧೂತ್ ಸಾಮಂತ್, ಶ್ರೀ ಸತೀಶ್ ಲಾಡ್, ಶ್ರೀ ರೋಹನ್, ಶ್ರೀ ಲಕ್ಷ್ಮೀಕಾಂತ್, ಶ್ರೀ ಅಭಿಮನ್ಯು ಸಹ ಉಪಸ್ಥಿತರಿದ್ದರು.



ಧಾರವಾಡ: ಭಾರತ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ಧಾರವಾಡ ಜಿಲ್ಲಾಡಳಿತ ನಗರದ ಆರ್.ಎಲ್.ಎಸ್. ಪಿಯು ಕಾಲೇಜದಲ್ಲಿ ಸ್ಥಾಪಿಸಿರುವ ಅಂಚೆ ಮತಪತ್ರ ವಿನಿಮಯ ಕೇಂದ್ರಕ್ಕೆ ಸೋಮವಾರ (ಏ.29) ವಿವಿಧ ಜಿಲ್ಲೆಗಳಿಂದ ಅಂಚೆಮತಪತ್ರಗಳ ವಿನಿಮಯಕ್ಕಾಗಿ ಅಂಚೆಮತಪತ್ರಗಳೊಂದಿಗೆ ಚುನಾವಣಾ ಸಿಬ್ಬಂದಿಗಳು ಆಗಮಿಸಿ, ವಿನಿಮಯ ಮಾಡಿಕೊಂಡರು.

# ಗೋಕಾಕ ತಾಲೂಕಿನಾದ್ಯಂತ ಮೃಣಾಲ ಹೆಬ್ಬಾಳಕರ್ ಗೆ ಭಾರೀ ಬೆಂಬಲ

ಗೋಕಾಕ:: ಗೋಕಾಕ ತಾಲೂಕಿನ ವಿವಿಧೆಡೆ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪ್ರಚಾರ ನಡೆಸಿ, ಮೇ 7ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ತಮ್ಮ ಗುರುತಾದ ಹಸ್ತಕ್ಕೆ ಮತ ನೀಡುವಂತೆ ಮನವಿ ಮಾಡಿದರು.

ಕಾಂಗ್ರೆಸ್ ಸರಕಾರ ನುಡಿದಂತೆ ನಡೆಯುತ್ತಿದೆ. ಗ್ಯಾರಂಟಿ ಯೋಜನೆಗಳ ಮೂಲಕ ನಿಮ್ಮ ನೆರವಿಗೆ ಬಂದಿದೆ. ಮುಂದಿನ ದಿನಗಳಲ್ಲಿ ಕೇಂದ್ರ ಸರಕಾರದ ಯೋಜನೆಗಳನ್ನು ತರುವ ಮೂಲಕ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲಾಗುವುದು. ಕೇವಲ ಚುನಾವಣೆ ಸಂದರ್ಭದಲ್ಲಿ ಬಂದಿರುವ ಬಿಜೆಪಿ ಅಭ್ಯರ್ಥಿಯ ಮಾತಿಗೆ ಮರುಳಾಗಬೇಡಿ. ಚುನಾವಣೆಯ ನಂತರ ಅವರು ಯಾರ ಕೈಗೂ ಸಿಗುವುದಿಲ್ಲ. ಸ್ಥಳೀಯನಾಗಿರುವ ನನ್ನನ್ನು ಬೆಂಬಲಿಸಿ ಎಂದು ಮನವಿ ಮಾಡಿದರು.

ಗೋಕಾಕ ವಿಧಾನಸಭಾ ಕ್ಷೇತ್ರದ ಮಕ್ಕಳಗೇರಿ, ಮಾಲದಿನ್ನಿ, ಉಪ್ಪಾರಟ್ಟಿ, ಮರಡಿ ಶಿವಾಪುರ ಹಾಗೂ ಮಮದಾಪುರ ಗ್ರಾಮಗಳಲ್ಲಿ ಪ್ರಚಾರ ಕೈಗೊಂಡು ಮತ ಯಾಚಿಸಿದರು.

ಹೋದಲ್ಲೆಲ್ಲ ಭಾರೀ ಬೆಂಬಲ ವ್ಯಕ್ತವಾಯಿತು. ಯಾವುದೇ ಕಾರಣದಿಂದ ಈ ಬಾರಿ ಬೆಳಗಾವಿಗೆ ಅನ್ಯಾಯ ಮಾಡಿರುವ ಹೊರಗಿನ



ಅಭ್ಯರ್ಥಿಗೆ ಮತ ನೀಡುವುದಿಲ್ಲ. ಪಕ್ಷಾತೀತವಾಗಿ ಎಲ್ಲರೂ ಕಾಂಗ್ರೆಸ್ ಬೆಂಬಲಿಸುತ್ತೇವೆ ಎಂದು ಜನರು ಅಭಯ ನೀಡಿದರು.

ಈ ಸಮಯದಲ್ಲಿ ಕಾಂಗ್ರೆಸ್ ವಕ್ತಾರೆ ತೇಜಸ್ವಿನಿ ಗೌಡ, ಕಾಂಗ್ರೆಸ್ ಮುಖಂಡರಾದ ಡಾ.ಮಹಾಂತೇಶ್ ಕಡಾಡಿ, ಸ್ಥಳೀಯ ಮುಖಂಡರು, ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ವಿವಿಧೆಡೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಚಾರ: ಎಲ್ಲೆಡೆ ಭಾರೀ ಬೆಂಬಲ

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ವಿವಿಧೆಡೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಚಾರ ನಡೆಸಿ, ಬೆಳಗಾವಿ ಜಿಲ್ಲೆಗೆ ದ್ರೋಹ ಮಾಡಿದವರಿಗೆ ಯಾವುದೇ ಕಾರಣದಿಂದ ಬೆಂಬಲ ನೀಡಬೇಡಿ, ಸ್ಥಳೀಯ ಅಭ್ಯರ್ಥಿಯಾಗಿರುವ ಮೃಣಾಲ ಹೆಬ್ಬಾಳಕರ್ ಅವರಿಗೆ ಮತ ನೀಡಿ ಎಂದು ಮನವಿ ಮಾಡಿದರು.

ಪಂತ ಬಾಳೆಕುಂದ್ರಿ, ಮುತಗಾ, ಬೆಳಗಾವಿ ದಕ್ಷಿಣ ಕ್ಷೇತ್ರ ಮಜಗಾವಿ ಮತ್ತಿತರ ಕಡೆಗಳಲ್ಲಿ ಮತಯಾಚನೆ ನಡೆಯಿತು. ಎಲ್ಲ ಕಡೆ ಜನರು ಸ್ವಯಂ ಸ್ಫೂರ್ತಿಯಿಂದ ಮುಂದೆ ಬಂದು ಈ ಬಾರಿ ಕಾಂಗ್ರೆಸ್ ಅಭ್ಯರ್ಥಿಗೇ ಮತ ನೀಡುತ್ತೇವೆ. ಇತಿಹಾಸದಲ್ಲೇ ಮೊಟ್ಟ ಮೊದಲ ಬಾರಿಗೆ ಸರಕಾರವೊಂದು



ನಮ್ಮ ಕೈ ಹಿಡಿದಿದೆ. ನಮ್ಮ ಸಂಕಷ್ಟದಲ್ಲಿ ಗ್ಯಾರಂಟಿ ಯೋಜನೆಗಳ ಮೂಲಕ ನೆರವು ನೀಡಿದೆ ಎಂದು ತಿಳಿಸಿದರು.

ಮೊದಲು ಪಂತ ಬಾಳೇಕುಂದ್ರಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಶ್ರೀ ದುರ್ಗಾದೇವಿ ಮಂದಿರಕ್ಕೆ ಭೇಟಿ ನೀಡಿ, ದೇವಿಯ ದರ್ಶನ ಆಶೀರ್ವಾದ ಪಡೆದ ಸಚಿವರು, ಸ್ಥಳೀಯರೊಂದಿಗೆ, ಈಚೇಗೆ ನಡೆದ ದೇವಸ್ಥಾನದ ವಾಸ್ತುಶಾಂತಿ ಹಾಗೂ ಮೂರ್ತಿ ಪ್ರಾಣ ಪ್ರತಿಷ್ಠಾಪನೆಗಳ ಕುರಿತು ಚರ್ಚಿಸಿದರು. ಗ್ರಾಮದಲ್ಲಿ ಹಬ್ಬದ ವಾತಾವರಣವೇ ನಿರ್ಮಾಣವಾಗಿತ್ತು.

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಸಹ ಜೊತೆಗಿದ್ದರು.

ಮುತಗಾ ಗ್ರಾಮದ ನೆಹರು ಗಲ್ಲಿಯಲ್ಲಿ ಲೋಕಸಭೆಯ ಚುನಾವಣೆಯ ಪ್ರಚಾರ ಕೈಗೊಂಡ ಸಚಿವರು, ಕಡ್ಡಾಯವಾಗಿ ಮತದಾನ ಮಾಡಿ, ಕಾಂಗ್ರೆಸ್ ಅಭ್ಯರ್ಥಿಗೇ ಮತ ನೀಡಿ ಎಂದು ಮನವಿ ಮಾಡಿದರು.

ಈ ಸಮಯದಲ್ಲಿ ಮುಖಂಡರಾದ ನಾಗೇಶ ದೇಸಾಯಿ, ಶ್ಯಾಮ್ ಮುತಗೇಕರ್, ಮಾರುತಿ ಪೂಜಾರ, ರಾಯಣ್ಣ ಮಲ್ಲವ್ವಗೋಳ, ಪಿಂಟು ಮಲ್ಲವ್ವಗೋಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನಂತರ ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಮಜಗಾವಿಯಲ್ಲಿ ಲೋಕಸಭೆ ಚುನಾವಣೆಯ ಪ್ರಚಾರ ಕೈಗೊಂಡು, ಮತ ಯಾಚಿಸಿದರು. ಜನರು ನೆಮ್ಮದಿಯಿಂದ ಬದುಕುವ ವಾತಾವರಣವನ್ನು ನಿರ್ಮಾಣ ಮಾಡಲಾಗುವುದು. ಕ್ಷೇತ್ರಕ್ಕೆ ಬೃಹತ್ ಯೋಜನೆಗಳನ್ನು ತರಲಾಗುವುದು. ಯುವಕರಿಗೆ ಸ್ಥಳೀಯವಾಗಿ ಉದ್ಯೋಗ ಅವಕಾಶ ಸೃಷ್ಟಿಸಲಾಗುವುದು. ಉದ್ಯಮಗಳನ್ನು ಆರಂಭಿಸುವವರಿಗೆ ಪ್ರೋತ್ಸಾಹ, ಸಹಕಾರ ನೀಡಲಾಗುವುದು. ಹಾಗಾಗಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರ ಹಸ್ತದ ಗುರುತಿಗೇ ಮತ ನೀಡಿ ಎಂದು ಸಚಿವರು ಮನವಿ ಮಾಡಿದರು.

ಈ ಸಮಯದಲ್ಲಿ ಸ್ಥಳೀಯ ಕಾಂಗ್ರೆಸ್ ಮುಖಂಡರು, ಪಕ್ಷದ ಕಾರ್ಯಕರ್ತರು, ಸಾರ್ವಜನಿಕರು ಉಪಸ್ಥಿತರಿದ್ದರು.



# ದ್ವಿತೀಯ ಪಿಯು ವಾರ್ಷಿಕ ಪರೀಕ್ಷೆ–2 981 ವಿದ್ಯಾರ್ಥಿಗಳು ಹಾಜರು, 232 ವಿದ್ಯಾರ್ಥಿಗಳು ಗೈರು ಹಾಜರು

ಧಾರವಾಡ: ಸೋಮವಾರ(ಏ.29) ಬೆಳಿಗ್ಗೆ ಜಿಲ್ಲೆಯಲ್ಲಿ ನಡೆದ ದ್ವಿತೀಯ ಪಿಯು ವಾರ್ಷಿಕ ಪರೀಕ್ಷೆ –2 ರ ಕನ್ನಡ ವಿಷಯದ ಪರೀಕ್ಷೆಗೆ ಜಿಲ್ಲೆಯ 12 ಪರೀಕ್ಷಾ ಕೇಂದ್ರಗಳಲ್ಲಿ ನೋಂದಾಯಿತರಾಗಿದ್ದ ಒಟ್ಟು 1213 ವಿದ್ಯಾರ್ಥಿಗಳ ಪೈಕಿ 981 ವಿದ್ಯಾರ್ಥಿಗಳು ಹಾಜರಾಗಿದ್ದರು.

232 ವಿದ್ಯಾರ್ಥಿಗಳು ಗೈರು ಹಾಜರು ಉಳಿದಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಪದವಿ ಪೂರ್ವ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಜ್ವಲ್ ಪ್ರಕರಣ ಕುರಿತು ಬಿಜೆಪಿಯ ಧೀಮಂತ ನಾಯಕರ ಮೌನವೇಕೆ?: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನೆ

ಬೆಳಗಾವಿ: ಇಡೀ ದೇಶವೇ ತಲೆ ತಗ್ಗಿಸುವಂಥ ಹಾಸನದ ಸಂಸದ ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಬಿಜೆಪಿ ನಾಯಕರು ಮೌನ ವಹಿಸಿರುವುದು ಏಕೆ? ಹುಬ್ಬಳ್ಳಿಯ ನೇಹಾ ಹಿರೇಮಠ ಕೊಲೆ ಪ್ರಕರಣದಲ್ಲಿ ಭಾರೀ ಆಸಕ್ತಿ ತೋರಿಸಿದ್ದ ಮಾಜಿ ಮುಖ್ಯಮಂತ್ರಿ, ಬಿಜೆಪಿ ಬೆಳಗಾವಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರೇ ಈಗಲೂ ಸಂತ್ರಸ್ತ ಮಹಿಳೆಯರ ಪರ ಧ್ವನಿ ಎತ್ತಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಗೃಹ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಮಹಿಳೆಯರಿಗೆ ಎಲ್ಲೇ ಅನ್ಯಾಯವಾದರೂ ನಾವು ಖಂಡಿಸುತ್ತೇವೆ. ಅವರ ಪರವಾಗಿ ನಿಲ್ಲುತ್ತೇವೆ. ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ. ಅದರಲ್ಲಿ ರಾಜಕೀಯ ಬೆರೆಸಲು ನಾವು ಹೋಗುವುದಿಲ್ಲ. ಆದ-ರೆ ಹುಬ್ಬಳ್ಳಿ ಪ್ರಕರಣದಲ್ಲಿ ಅತೀವ ಆಸಕ್ತಿ ತೋರಿಸಿದ್ದ ಬಿಜೆಪಿ ನಾಯಕರು ಈಗೇಕೆ ಮೌನವಾಗಿದ್ದಾರೆ. ಇಲ್ಲೂ ನೂರಾರು ಮಹಿಳೆಯರಿಗೆ ಅನ್ಯಾಯವಾಗಿದೆಯಲ್ಲವೇ? ಈಗಲೂ ಸಂಸದೆ ಮಂಗಲಾ ಅಂಗಡಿ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ಮಾಡಲಿ. ಜಗದೀಶ ಶೆಟ್ಟರ್ ಅಷ್ಟೇ ಆಸಕ್ತಿಯಿಂದ ಹೇಳಿಕೆಗಳನ್ನು ನೀಡಲಿ ಎಂದು ಆಗ್ರಹಿಸಿದರು.

ಪ್ರಜ್ವಲ್ ರೇವಣ್ಣ ಪ್ರಕರಣಕ್ಕೆ ಏನು ಹೇಳ್ತೀರಾ ನಾರಿ ಶಕ್ತಿ, ನಾರಿ ಸಮ್ಮಾನ್, ಬೇಟಿ ಬಚ್ಚಾವ್, ಬೇಟಿ ಪಡಾವ್ ಅಂತ ಹೇಳುವ ಬಿಜೆಪಿಗರು, ಈಗ ಯಾಕೆ ಮೌನವಾಗಿದ್ದಾರೆ. ಮಾತು ಆಡಿದರೆ ಕರ್ನಾಟಕ ಸರ್ಕಾರವನ್ನು ಟೀಕಿಸುವ ಮೋದಿಜೀ ಅವರ ಈಗಿನ ನಿಲುವೇನು? ಇಲ್ಲಿನ ಸಂತ್ರಸ್ತ ಮಹಿಳೆಯರ ಮಾಂಗಲ್ಯದ ಕತೆಯೇನು? ಕರ್ನಾಟಕ ರಾಜ್ಯದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆಯಾಗಿ ಪ್ರಶ್ನೆ ಕೇಳ್ತಾ ಇದ್ದೀನಿ ಎಂದು ಹೇಳಿದರು.

**ಕಾನೂನು ಚೌಕಟ್ಟಿನಡಿ ಕ್ರಮ:**

ವಿದೇಶದಿಂದ, ಹೊರ ರಾಜ್ಯಗಳಿಂದ ಫೋನ್ ಕಾಲ್ ಗಳು ಬರುತ್ತಿವೆ. ಇಂತಹ



ಪ್ರಕರಣ ನಡೆದಿದ್ದು ನಿಜವೇ ಎಂದು ಪ್ರಶ್ನಿಸುತ್ತಿದ್ದಾರೆ. ಸರಕಾರ ಏನು ಕ್ರಮ ಕೈಗೊಳ್ಳಲಿದೆ ಎಂದು ಪ್ರಶ್ನಿಸುತ್ತಿದ್ದಾರೆ. ಪ್ರಕರಣವನ್ನು ರಾಜ್ಯ ಸರ್ಕಾರ ಈಗಾಲೇ ಎಸ್ ಐಟಿ ತನಿಖೆಗೆ ವಹಿಸಿದ್ದು, ಕಾನೂನಿನ ಚೌಕಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಬಿಜೆಪಿಯ ಮಹಿಳಾ ಮಣಿಗಳು ಎಲ್ಲಿದ್ದಾರೆ. ಸಂಸದೆ ಮಂಗಲಾ ಅಂಗಡಿ ಅವರ ನೇತೃತ್ವದಲ್ಲಿ ಬೆಳಗಾವಿಯಲ್ಲಿ ದೊಡ್ಡ ಮಟ್ಟದ ಪ್ರತಿಭಟನೆ ಆಗಬೇಕು, ನೇಹಾ ಹಿರೇಮಠ ವಿಷಯದಲ್ಲಿ ಮಾತಾಡಿದಂತೆ ಜಗದೀಶ್ ಶೆಟ್ಟರ್ ಅವರು ಮಾತಾಡಬೇಕು. 16 ವರ್ಷದಿಂದ 50, 60 ವರ್ಷದ ಮಹಿಳೆಯರು ಪ್ರಜ್ವಲ್ ರೇವಣ್ಣ ಅವರಿಂದ ನೊಂದಿದ್ದಾರೆ. ಮಹಿಳೆಯರ ಪರ ಮೈತ್ರಿ ನಾಯಕರು ನಿಲ್ಲಲಿ ಎಂದು ಹೇಳಿದರು.

ಬಿಜೆಪಿಯ ಮಾಜಿ ಶಾಸಕ ಪ್ರೀತಂ ಗೌಡ, ಹಿರಿಯ ಮುಖಂಡ ಎ.ಟಿ.ರಾಮಸ್ವಾಮಿ, ದೇವರಾಜ್ ಗೌಡ ಎಂಬುವರು, ಪ್ರಜ್ವಲ್ ರೇವಣ್ಣ ಪ್ರಕರಣವನ್ನು ಮೈಸೂರು ಪ್ರವಾಸದಲ್ಲಿದ್ದ ಅಮಿತ್ ಷಾ ಅವರ ಗಮನಕ್ಕೆ ಆಗಲೇ ತಂದಿದ್ದರು. ಇಂಥ ವಿಷಯ ಗೊತ್ತಿದ್ದರೂ ಮೈತ್ರಿ ನಾಯಕರು ಪ್ರಜ್ವಲ್ ಅವರನ್ನೇ ಅಭ್ಯರ್ಥಿಯನ್ನಾಗಿ ಮಾಡಿದ್ದು ಎಷ್ಟು ಸರಿ. ಇದಕ್ಕೆ ಬಿಜೆಪಿ ನಾಯಕರು ಉತ್ತ-ರಿಸುವರೇ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಪ್ರಝ್ವಲ್ ರೇವಣ್ಣ ಪ್ರಕರಣದ ಕುರಿತು ಬಿಜೆಪಿ ನಾಯಕರಿಗೆ ಮೊದಲೇ ಅರಿವಿತ್ತು ಎಂದೂ ಸಚಿವರು ಹೇಳಿದರು.

ನೇಹಾ ಹಿರೇಮಠ ಕೊಲೆ ಪ್ರಕರಣದಲ್ಲಿ ರಾಜ್ಯಾದ್ಯಂತ ಪ್ರತಿಭಟನೆ ಮಾಡುತ್ತಿರುವ ಬಿಜೆಪಿ ನಾಯಕರು, ಈಗ ಯಾಕೆ ಜಾಣ ಮೌನವಾಗಿದ್ದಾರೆ. ಮೊನ್ನೆ ಮಾಜಿ ಶಾಸಕರೊಬ್ಬರೂ ನನ್ನ ಬಗ್ಗೆ ತುಚ್ಚವಾಗಿ ಮಾತಾಡುವಾಗ ವೇದಿಕೆಯಲ್ಲಿದ್ದ ಸಂಸದೆ ಮಂಗಲಾ ಅಂಗಡಿ, ಜಗದೀಶ್ ಶೆಟ್ಟರ್ ನಕ್ಕರು ಹೊರತು ಏನು ಮಾತಾಡ್ಲಿಲ್ಲ. ಸಂಜಯ್ ಪಾಟೀಲ್ ಗೆ ಕನಿಷ್ಠ ಬುದ್ದಿವಾದ ಹೇಳಲಿಲ್ಲ ಎಂದು ಸಚಿವರು ಆರೋಪಿಸಿದರು.

ಉಡುಪಿ ಹಾಸ್ಟೆಲ್ ನಲ್ಲಿ ಕ್ಯಾಮೆರಾ ಇಟ್ಟ ವಿಷಯವನ್ನು ಬಿಜೆಪಿಯವರು ರಾಜ-ಕರಣಗೊಳಿಸಿದ್ರು, ರಾಷ್ಟ್ರೀಯ ಮಹಿಳಾ ಆಯೋಗದವರು ಓಡೋಡಿ ಬಂದರು. ಈಗ ಸಾವಿರಾರು ಮಹಿಳೆಯರ ಮಾನ ಹರಾಜಾದ್ರು ಯಾರು ಏನೂ ಮಾತಾಡುತ್ತಿಲ್ಲ. ಅಶೋಕ್, ವಿಜಯೇಂದ್ರ ಅವರೇ ಈಗ ಏನು ಹೇಳ್ತೀರಾ, ಶೋಭಾ ಕರಂದ್ಲಾಜೆ, ಸ್ಮತಿ ಇರಾನಿ ಅವರು ಯಾಕೆ ಏನು ಹೇಳ್ತಿಲ್ಲ. ಮಂಡ್ಯ ಸೊಸೆ ಸುಮಲತಾ ಏನ್ ಮಾಡ್ತಿದ್ದಾರೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಕಿಡಿ ಕಾರಿದರು.

ಸರಕಾರ ನೊಂದ ಮಹಿಳೆಯರ ಪರವಾಗಿ ನಿಲ್ಲಲಿದೆ. ಅವರ ರಕ್ಷಣೆ ಮಾಡಲಿದೆ. ಪ್ರಕರಣದ ಕುರಿತು ಸೂಕ್ತ ಕಾನೂನು ಕ್ರಮ ಕೈಗೊಳ್ಳಲಿದೆ. ಸಮಾಜದ ಸ್ವಾಸ್ಥ್ಯ ಕೆಡಿಸುವ ಪ್ರಜ್ವಲ್ ಪ್ರಕರಣದ ವಿಡೀಯೋಗಳನ್ನು ಯಾರೂ ಫಾರ್ ವರ್ಡ್ ಮಾಡಬಾರದು ಎಂದು ಸಚಿವರು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಸಚಿವ ಡಾ. ಎಂ.ಸಿ.ಸುಧಾಕರ್, ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ವಿನಯ್ ನಾವಲಗಟ್ಟಿ ಉಪಸ್ಥಿತರಿದ್ದರು.

## ಸಹಾಯಕ ಚುನಾವಣಾಧಿಕಾರಿಗಳ ಸಭೆ

# ಮನೆ ಮನೆಗೆ ತೆರಳಿ ಮತದಾರರ ಚೀಟಿ ವಿತರಿಸಲು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಮತದಾರರಿಗೆ ತಮ್ಮ ಮತಗಟ್ಟೆಗಳ ಬಗ್ಗೆ ಮುಂಚಿತವಾಗಿ ಮತದಾರರ ಚೀಟಿ(ವೋಟರ್ ಸ್ಲಿಪ್) ಗಳನ್ನು ನೀಡಿದರೆ ಮತದಾನ ಮಾಡಲು ಅನುಕೂಲವಾಗಲಿದೆ. ಆದ್ದರಿಂದ ಪ್ರತಿಯೊಂದು ಮತಗಟ್ಟೆ ವ್ಯಾಪ್ತಿಯಲ್ಲಿ ಮತದಾರರ ಚೀಟಿ ಕಡ್ಡಾಯವಾಗಿ ವಿತರಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸೋಮವಾರ(ಏ.29) ನಡೆದ ಬೆಳಗಾವಿ ಲೋಕಸಭಾ



ಕ್ಷೇತ್ರದ ವ್ಯಾಪ್ತಿಯ ಸಹಾಯಕ ಚುನಾವಣಾಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಮತದಾನ ದಿನ ಸಮೀಪಿಸುತ್ತಿರುವುದರಿಂದ ಚುನಾವಣಾ ಸಿಬ್ಬಂದಿ ಕೂಡಲೇ ಮನೆ ಮನೆಗೆ ತೆರಳಿ ಮತದಾರರ ಚೀಟಿ ವಿತರಣೆ ಮಾಡಬೇಕು ಎಂದು ಹೇಳಿದರು.

ಮತದಾನ ಜಾಗೃತಿಗಾಗಿ ಅನೇಕ ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಅದಕ್ಕೆ ಪೂರಕವಾಗಿ ಬಿಎಲ್.ಓ.ಗಳು ಮನೆಮನೆಗೆ ತೆರಳಿ ಮತದಾರರ ಚೀಟಿ ವಿತರಿಸುವುದರಿಂದ ಮತದಾನ ಪ್ರಮಾಣ ಹೆಚ್ಚಿಸಲು ಸಾಧ್ಯವಾಗಲಿದೆ.

ಕಳೆದ ಚುನಾವಣೆಯಲ್ಲಿ ಮತದಾನ ಕಡಿಮೆಯಾಗಿರುವ ಮತಗಟ್ಟೆಗಳ ವ್ಯಾಪ್ತಿಯಲ್ಲಿ ತಪ್ಪದೇ ಮತದಾರರ ಚೀಟಿ ವಿತರಿಸಬೇಕು.

ಇದರಿಂದ ಸಾರ್ವಜನಿಕರಿಗೆ ತಮ್ಮ ಮತಗಟ್ಟೆಯನ್ನು ತಲುಪಲು ಅನುಕೂಲವಾಗಲಿದೆ ಎಂದು ನಿತೇಶ್ ಪಾಟೀಲ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ವಿಶೇಷ ಜಿಲ್ಲಾಧಿಕಾರಿ ಗೀತಾ ಕೌಲಗಿ ಉಪಸ್ಥಿತ-ರಿದ್ದರು.

ಸಹಾಯಕ ಚುನಾವಣಾಧಿಕಾ-ರಿಗಳಾದ ಪಿ.ಎನ್.ಲೋಕೇಶ್, ರಾಜಶ್ರೀ ಜೈನಾಪುರ, ಡಾ.ರಾಜೀವ್ ಕೂಲೇರ್, ಬಲರಾಮ್ ಚವಾಣ, ಪ್ರಭಾವತಿ ಫಕ್ಕೀರಪುರ, ಸತೀಶ್ ಕುಮಾರ್, ಷಕೀಲ್ ಅಹ್ಮದ್ ಹಾಗೂ ತಹಶೀಲ್ದಾರರು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಬೈಲಹೊಂಗಲ ಘಟಕದ ಕರ್ತವ್ಯ ನಿರತ ಚಾಲಕ ಮತ್ತು ನಿರ್ವಾಹಕರ ಮೇಲೆ ಹಲ್ಲೆ: ಆಪಾದಿತರ ಮೇಲೆ ಎಫ್.ಐ.ಆರ್ ದಾಖಲು

ಬೆಳಗಾವಿ: ಬೈಲಹೊಂಗಲ ಘಟಕದ ಕರ್ತವ್ಯ ನಿರತ ಚಾಲಕ ಮತ್ತು ನಿರ್ವಾಹಕರ ಮೇಲೆ ಏ. 25 ರಂದು ಪ್ರಯಾಣಿಕರು ಮತ್ತು ಅವರ ಸಂಬಂಧಿಕರು ಸೇರಿ ದೈಹಿಕ ಹಲ್ಲೆ ನಡೆಸಿ ಅವಾಚ್ಯ ಶಬ್ದಗಳಿಂದ ಬೈಯುವ ಮೂಲಕ ಕರ್ತವ್ಯಕ್ಕೆ ಅಡ್ಡಿಪಡಿಸಿದು ಮತ್ತು ಆ ಮೂಲಕ ಸಾರ್ವಜನಿಕ ಪ್ರಯಾಣಿಕರಿಗೆ ಅನಾನುಕೂಲತೆ ಉಂಟು ಮಾಡಿದ 03 ಜನ ಪುರುಷ, ಒಬ್ಬ ಮಹಿಳೆ ಸೇರಿ 04 ಜನರ ಮೇಲೆ ಬೈಲಹೊಂಗಲ ಪೊಲೀಸ್ ಠಾಣೆಯಲ್ಲಿ ಸಂಸ್ಥೆಯಿಂದ ಎಫ್. ಐ. ಆರ್ ದಾಖಲಿಸಲಾಗಿರುತ್ತದೆ.

ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವಲ್ಲಿ ಸಂಸ್ಥೆಯ ಚಾಲಕ, ನಿರ್ವಾಹಕರು ರಜಾ, ಹಬ್ಬ-ಹರಿ ದಿನಗಳು ಸೇ-ರಿದಂತೆ ನಿರಂತರ ಹಗಲಿರುಳು ಶ್ರಮ ಪಡುತ್ತಿದ್ದು, ಸಾರ್ವಜನಿಕ ಪ್ರಯಾಣಿಕರು ಸಾರಿಗೆ ಸಿಬ್ಬಂದಿಗಳೊಂದಿಗೆ ಸಹಕರಿಸಲು ಮತ್ತು ತಮ್ಮ ಏನೆ ದೂರು/ಕುಂದು ಕೊರತೆಗಳಿದ್ದಲ್ಲಿ ಬಸ್ ನಿಲ್ದಾಣದ ಅಧಿಕಾರಿ ಅವರಲ್ಲಿ ದೂರು ದಾಖಲಿಸಲು ತಿಳಿಸಲಾಗಿದೆ.

ಈ ಮುಂದೆ ಈ ರೀತಿ ಕರ್ತವ್ಯದ ಮೇಲೆ ಇರುವ ಸಂಸ್ಥೆಯ ಸಿಬ್ಬಂದಿಗಳ ಮೇಲೆ ಹಲ್ಲೆ, ಬೆದರಿಕೆ ಮತ್ತು ಕರ್ತವ್ಯಕ್ಕೆ ಅಡೆ-ತಡೆಯುಂಟು ಮಾಡುವ ವ್ಯಕ್ತಿಗಳ ಮೇಲೆ ಸೂಕ್ತ ಕಾನೂನು ಕ್ರಮ ಕೋರಿ ಪೊಲೀಸ್ ಪ್ರಕರಣ ದಾಖಲಿಸಲಾಗುವದು ಎಂದು ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿರಿಯ ನಾಯಕ, ಮಾಜಿ ಸಚಿವ ವಿ.ಶ್ರೀನಿವಾಸ್ ಪ್ರಸಾದ್ ನಿಧನಕ್ಕೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸಂತಾಪ



ಬೆಳಗಾವಿ: ಹಿರಿಯ ನಾಯಕ, ಮಾಜಿ ಸಚಿವ ವಿ. ಶ್ರೀನಿವಾಸ್ ಪ್ರಸಾದ್ ಅವರ ನಿಧನಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಸಂತಾಪ ಸೂಚಿಸಿದ್ದಾರೆ.

ಸದಾ ಶೋಷಿತರ ಪರ ಯೋಚಿಸುತ್ತಿದ್ದ ಸನ್ಮಾನ್ಯ ಶ್ರೀನಿವಾಸ್ ಪ್ರಸಾದ್ ಅವರ ನಿಧನದಿಂದ ತುಂಬಾ ನೋವುಂಟಾಗಿದ್ದು, ಅಗಲಿಕೆಯ ನೋವು ಭರಿಸುವ ಶಕ್ತಿಯನ್ನು ಕುಟುಂಬ ವರ್ಗ, ಅಭಿಮಾನಿಗಳಿಗೆ ಭಗವಂತನು ಕರುಣಿಸಲಿ ಎಂದು ಪ್ರಾರ್ಥನೆ ಮಾಡುತ್ತೇನೆ ಎಂದು ಹೇಳಿದ್ದಾರೆ.

ಮೈಸೂರು ಭಾಗದ ರಾಜಕಾರಣದಲ್ಲಿ ತಮ್ಮದೇ ಆದ ಕೊಡುಗೆ ಕೊಟ್ಟಿರುವ ಶ್ರೀನಿವಾಸ್ ಪ್ರಸಾದ್, ನಾಡು ಕಂಡ ಧೀಮಂತ ರಾಜ-ಕಾರಣಿಗಳಲ್ಲಿ ಒಬ್ಬರು. ಕೇಂದ್ರ, ರಾಜ್ಯ ಸಚಿವ ಸಂಪುಟಗಳಲ್ಲಿ ಸಚಿವರಾಗಿ ಕಾರ್ಯನಿರ್ವಹಿಸಿದ್ದ ಅವರು, 50 ವರ್ಷಗಳ ಕಾಲ ರಾಜಕೀಯದಲ್ಲಿ ಸಕ್ರಿಯರಾಗಿದ್ದ ಅಪರೂಪದ ರಾಜಕಾರಣಿ, ಅವರ ನಿಧನದಿಂದ ಕರ್ನಾಟಕ ಓರ್ವ ಮೌಲ್ಯಧಾರಿತ ರಾಜಕಾರಣ ಯನ್ನು ಕಳೆದುಕೊಂಡಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸಂತಾಪ ವ್ಯಕ್ತಪಡಿಸಿದ್ದಾರೆ.

## ಬೆಳಗಾವಿ ದಕ್ಷಿಣದಲ್ಲೂ ಕಾಂಗ್ರೆಸ್ ಗೆ ಭರ್ಜರಿ ಮುನ್ನಡೆ: ಮೃಣಾಲ ಹೆಬ್ಬಾಳಕರ್ ವಿಶ್ವಾಸ

ಬೆಳಗಾವಿ : ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರಿಗೆ ಉತ್ತಮ ಬೆಂಬಲ ವ್ಯಕ್ತವಾಗುತ್ತಿದ್ದು, ಅತ್ಯಧಿಕ ಮತ ಸಿಗುವ ನಿರೀಕ್ಷೆ ಮೂಡಿದೆ. ದಕ್ಷಿಣ ಕ್ಷೇತ್ರದ ಹಲವೆಡೆ ಪ್ರಚಾರ ನಡೆಸಿದ ಮೃಣಾಲ ಹೆಬ್ಬಾಳಕರ್, ಕ್ಷೇತ್ರದಲ್ಲಿ ಭಾರೀ ಮುನ್ನಡೆ ಖಚಿತ ಎಂದು ಹೇಳಿದ್ದಾರೆ.

ಖಾಸಬಾಗ್ ದ ಶ್ರೀ ಜಯಶಂಕರ ಭವನದಲ್ಲಿ ಮತ್ತು ಟಿಳಕವಾಡಿಯ ಶ್ರೀ ಛತ್ರಪತಿ ಶಿವಾಜಿ ಮೈದಾನದಲ್ಲಿ ನಡೆದ ಕಾರ್ಯಕರ್ತರ ಸಭೆಯಲ್ಲಿ ಅಪಾರ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸಿದ್ದರು.

ಎಲ್ಲೆಡೆ ನಮಗೆ ಉತ್ತಮ ವಾತಾವರಣವಿದ್ದು, ಜನರು ಸ್ವಯಂ ಸ್ಫೂರ್ತಿಯಿಂದ ಪಕ್ಷಭೇದ ಮರೆತು ಬೆಂಬಲ ಸೂಚಿಸುತ್ತಿದ್ದಾರೆ ಎಂದು ಹೇಳಿದರು.

ಜಿಲ್ಲೆಗೆ ಅನ್ಯಾಯ ಮಾಡಿದ ಹೊರಗಿನ ಅಭ್ಯರ್ಥಿಗೆ ಮತ ನೀಡಲು ಯಾ-



ರಿಗೂ ಮನಸ್ಸಿಲ್ಲ. ಏನೇ ಆದರೂ ನಾವು ಸ್ವಾಭಿಮಾನಿಗಳು. ನಮ್ಮ ಜಿಲ್ಲೆಯ ಅಭ್ಯರ್ಥಿಯನ್ನೇ ಬೆಂಬಲಿಸುತ್ತೇವೆ ಎಂದು ಹೇಳುತ್ತಿದ್ದಾರೆ. ಹಾಗಾಗಿ ಪಕ್ಷ, ಜಾತಿ ಯಾವ ಭೇದವಿಲ್ಲದೆ ಜನರು ಕಾಂಗ್ರೆಸ್ ಬೆಂಬಲಿಸಲಿದ್ದಾರೆ ಎಂದು ಅವರು ತಿಳಿಸಿದರು.

ದಕ್ಷಿಣ ಮತ ಕ್ಷೇತ್ರದ ಬಹುತೇಕ ಎಲ್ಲ ಭಾಗಗಳಲ್ಲಿ ಪ್ರಚಾರ ನಡೆಸಲಾಗಿದೆ. ಅತ್ಯಂತ ಪ್ರೀತಿಯಿಂದ ಎಲ್ಲರೂ ಸ್ವಾಗತಿಸಿದ್ದಾರೆ. ಕಾಂಗ್ರೆಸ್ ಗ್ಯಾರಂಟಿಗಳು ಅವರಿಗೆಲ್ಲ ನೆಮ್ಮದಿ ಕಲ್ಪಿಸಿವೆ. ಹಾಗಾಗಿ ಈ ಬಾರಿ ಖಂಡಿತ ಬದಲಾವಣೆಯಾಗಲಿದೆ ಎಂದು ಮೃಣಾಲ ಹೆಬ್ಬಾಳಕರ್ ತಿಳಿಸಿದರು. ಈ ಸಮಯದಲ್ಲಿ ಸ್ಥಳೀಯ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ವಾಕರಸಾ ಸಂಸ್ಥೆ ಚಾಲಕ ಮತ್ತು ನಿರ್ವಾಹಕ ಸಿಬ್ಬಂದಿಗಳ ಗಮನಕ್ಕೆ

ಬೆಳಗಾವಿ: ವಾಕರಸಾ ಸಂಸ್ಥೆ ಚಾಲಕ ಮತ್ತು ನಿರ್ವಾಹಕರು ಅನಧಿಕೃತವಾಗಿ ಕರ್ತವ್ಯಕ್ಕೆ ಗೈರು ಹಾಜರಾಗುತ್ತಿರುವ ಕಾರಣ ದೈನಂದಿನ ಸಾರಿಗೆ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾಗುತ್ತಿರುವುದರಿಂದ ಚಾಲಕ ನಿರ್ವಾಹಕರು ಕರ್ತವ್ಯಕ್ಕೆ ಗೈರು ಹಾಜರಾಗದಂತೆ ಅನೇಕ ಪತ್ರಗಳ ಮೂಲಕ ತಿಳಿಸಲಾಗಿದೆ.

ಚುಣಾವಣಾ ಕಾರ್ಯಕ್ಕಾಗಿ ವಾಹನಗಳನ್ನು ಪೂರೈಸುವಂತೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಹಾಗೂ ಇನ್ನಿತರ ಸರ್ಕಾರಿ ಕಚೇ-ರಿಗಳಿಂದ ಬೇಡಿಕೆಗಳು ಬರುತ್ತಿದ್ದು, ನಿಗದಿತ ಎಲ್ಲಾ ಅನುಸೂಚಿಗಳ ಕಾರ್ಯಾಚರಣೆಯೊಂದಿಗೆ ಹೆಚ್ಚುವರಿ ವಾಹನಗಳನ್ನು ಪೂರೈಸಬೇಕಾಗಿರುವುದರಿಂದ ಏ.30 ರಿಂದ ಜಾರಿಗೆ ಬರುವಂತೆ ಯಾವುದೇ ಕಾರಣಕ್ಕೂ ಅನಧಿಕೃತವಾಗಿ ಕರ್ತವ್ಯಕ್ಕೆ ಗೈರು ಹಾಜರಾಗಬಾರದು.


ಒಂದು ವೇಳೆ ಕರ್ತವ್ಯಕ್ಕೆ ಅನಧಿಕೃತವಾಗಿ ಗೈರು ಹಾಜರಾಗಿ ಚುನಾವಣಾ ಕಾರ್ಯಕ್ಕೆ ಅಡತಡೆ ಉಂಟಾದಲ್ಲಿ ಅಂತಹ ಸಿಬ್ಬಂದಿಗಳ ಮೇಲೆ ಜನತಾ ಪ್ರಾತಿನಿಧ್ಯ ಅಧಿನಿಯಮ-1951 ರಡಿಯಲ್ಲಿ ಸೂಕ್ತ ಶಿಸ್ತಿನ ಕ್ರಮ ಜರುಗಿಸಲಾಗುವುದು ಎಂದು ಬೆಳಗಾವಿ ವಿಭಾಗದ ವಾಕರಸಾ ಸಂಸ್ಥೆ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಧ್ಯಮ ಕಣ್ಗಾವಲು ಘಟಕಕ್ಕೆ ವೆಚ್ಚ ವೀಕ್ಷಕರ ಭೇಟಿ

## ಚುನಾವಣಾ ವೆಚ್ಚ, ನೀತಿಸಂಹಿತೆ ಉಲ್ಲಂಘನೆ ಮೇಲೆ ನಿಗಾ ವಹಿಸಲು ವೆಚ್ಚ ವೀಕ್ಷಕರ ಸೂಚನೆ

ಬೆಳಗಾವಿ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ಕ್ಷೇತ್ರಗಳ ವೆಚ್ಚ ವೀಕ್ಷಕರು ನಗರದ ವಾರ್ತಾಭವನದಲ್ಲಿ ಸ್ಥಾಪಿಸಲಾಗಿರುವ ಮಾಧ್ಯಮ ಕಣ್ಗಾವಲು ಘಟಕಕ್ಕೆ ಸೋಮವಾರ(ಏ.29) ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬೆಳಗಾವಿ ಲೋಕಸಭಾ ಕ್ಷೇತ್ರದ ವೆಚ್ಚ ವೀಕ್ಷಕರಾದ ಹರಕ್ರಿಪಾಲ್ ಖಟಾನಾ ಅವರು, ದಿನಪತ್ರಿಕೆ, ಟಿವಿ ಚಾನೆಲ್ ಹಾಗೂ ಸಾಮಾಜಿ-ಕ ಜಾಲತಾಣಗಳಲ್ಲಿ ಪ್ರಕಟವಾಗುವ ಪ್ರತಿಯೊಂದು ಚುನಾವಣಾ ಸುದ್ದಿ




ಹಾಗೂ ಜಾಹೀರಾತುಗಳ ಮೇಲೆ ನಿಗಾ ವಹಿಸಬೇಕು ಎಂದು ತಿಳಿಸಿದರು.

ರಾಜಕೀಯ ಪಕ್ಷಗಳು ಅಥ-ವಾ ಅಭ್ಯರ್ಥಿಗಳ ಚುನಾವಣಾ ಜಾಹೀರಾತುಗಳಿಗೆ ಸಂಬಂಧಿಸಿದ ವೆಚ್ಚವನ್ನು ಸಹಾಯಕ ವೆಚ್ಚ ನೋಡಲ್ ಅಧಿಕಾರಿಗಳ ಗಮನಕ್ಕೆ ತರಬೇಕು.

ಇದಲ್ಲದೇ ಮಾದರಿ ನೀತಿಸಂಹಿತೆ ಉಲ್ಲಂಘನೆ ಕಂಡುಬಂದರೆ ಅಂತಹ ವಿಷಯಗಳನ್ನು ಕೂಡ ಎಂ.ಸಿ.ಸಿ. ನೋಡಲ್ ಅಧಿಕಾರಿಗಳ ಅವಗಾಹನೆಗೆ ತರಬೇಕು ಎಂದು ತಿಳಿಸಿದರು.

ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿ-ಎಂಸಿ)ಯ ಕಾರ್ಯಚಟುವಟಿಕೆಗಳ ಬಗ್ಗೆ ಮಾಹಿತಿಯನ್ನು ನೀಡಿದ ನೋಡಲ್ ಅಧಿಕಾರಿ ಗುರುನಾಥ ಕಡಬೂರ ಅವರು, ಪ್ರತಿಯೊಂದು ದಿನಪತ್ರಿಕೆಗಳು, ಟಿವಿ ಚಾನೆಲ್ ಮಾತ್ರವಲ್ಲದೇ ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ವಹಿಸಲಾಗಿರುತ್ತದೆ ಎಂದು ವಿವ-ರಿಸಿದರು.

ಬೆಳಗಾವಿ ಲೋಕಸಭಾ ಕ್ಷೇತ್ರದ ವೆಚ್ಚ ವೀಕ್ಷಕರಾದ ನರಸಿಂಗ್ ರಾವ್ ಬಿ., ಚಿಕ್ಕೋಡಿ ಲೋಕಸಭಾ ಕ್ಷೇತ್ರದ ವೆಚ್ಚ ವೀಕ್ಷಕರಾದ ಎನ್.ಮೋಹನ ಕೃಷ್ಣಾ, ಅಂಕಿತ್ ತಿವಾರಿ, ಐ.ಎ.ಎಸ್.ಪ್ರೊಬೇಷನರಿ ಅಧಿಕಾರಿ ಶುಭಂ ಶುಕ್ಲಾ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಮಾಧ್ಯಮ ಘಟಕದ ಉಸ್ತುವಾ-ರಿಗಳಾದ ಶ್ರೀಮತಿ ಝುಡ್.ಜಿ.ಸಯ್ಯದ್, ವಿ.ಎಂ.ಕಂಗ್ರಾಳಕರ, ಶ್ರೀಮತಿ ಎಂ.ಎಂ.ಪಾಟೀಲ, ಎಸ್.ಎಸ್.ಘೋರ್ಪಡೆ, ಎ.ಬಿ.ಕಾಮಣ್ಣವರ, ಎಂ.ಪಿ.ನಿಚ್ಚಣಕಿ, ಮಹಾಂತೇಶ ಪತ್ತಾರ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಹಾಟ್ ಏರ್ ಬಲೂನ್ ಹಾರಾಟ ಹಾಗೂ ಬೆಳಗಾವಿ ಜಿಲ್ಲೆ ಮತದಾನ ಜಾಗೃತಿ ಮಾಸ್ಕಾಟ ಅನಾವರಣ

ಬೆಳಗಾವಿ: ನಗರದ ಸರ್ದಾರ್ ಹೈಸ್ಕೂಲ್ ಮೈದಾನದಲ್ಲಿ ಏ.30 ರಂದು ಬೆಳಗ್ಗೆ 8 ಗಂಟೆಗೆ ಮತದಾನದ ಜಾಗೃತಿಗಾಗಿ ಹಾಟ್ ಏರ್ ಬಲೂನ್ ಹಾರಾಟ ಹಾಗೂ ಬೆಳಗಾವಿ ಜಿಲ್ಲೆ ಮತದಾನ ಜಾಗೃತಿ ಮಾಸ್ಕಾಟ ಅನಾವರಣ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಅಂಜುಂ ಪರ್ವೇಜ್ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ ಎಂದು ಜಿ.ಪಂ. ಸಿಇಓ ರಾಹುಲ್ ಶಿಂಧೆ ತಿಳಿಸಿದ್ದಾರೆ.

ಜಿಪಂ ಸಿಇಓ ರಾಹುಲ್ ಶಿಂಧೆ, ಜಿಪಂ ಯೋಜನಾ ನಿರ್ದೇಶಕ ಎಂ.ಕೃಷ್ಣರಾಜು, ಜಿಪಂ ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ್, ಮುಖ್ಯ ಲೆಕ್ಕಾಧಿಕಾರಿ ಪರಶುರಾಮ ದುಡಗುಂಡಿ, ಜಿಪಂ. ಲೆಕ್ಕಾಧಿಕಾರಿ ಗಂಗಾ ಹಿರೇಮಠ್ ಮೊದಲಾದವರು ಭಾಗವಹಿಸಲಿದ್ದಾರೆ.

## ಈಜಲು ತೆರಳಿದ್ದ ಐವರು ವಿದ್ಯಾರ್ಥಿಗಳು ನಾಪತ್ತೆ



ಬೆಂಗಳೂರು: ಈಜಲು ತೆರಳಿದ್ದ ಐವರು ವಿದ್ಯಾರ್ಥಿಗಳು ನೀರುಪಾಲಾಗಿರುವ ಘಟನೆ ಮೇಕೆದಾಟು ಸಂಗಮದಲ್ಲಿ ನಡೆದಿದೆ.

ಬೆಂಗಳೂರಿನ ಖಾಸಗಿ ಕಾಲೇಜಿನ ವಿದ್ಯಾರ್ಥಿಗಳು ನಾಪತ್ತೆಯಾಗಿದ್ದಾರೆ. ಮೂವರು ವಿದ್ಯಾರ್ಥಿನಿಯರು ಹಾಗೂ ಇಬ್ಬರು ವಿದ್ಯಾರ್ಥಿಗಳು ಈಜಲೆಂದು ಮೇಕೆದಾಟು ಸಂಗಮದಲ್ಲಿ ಇಳಿದಿದ್ದರು. ಈ ವೇಳೆ ಏಕಾಏಕಿ ನಾಪತ್ತೆಯಾಗಿದ್ದಾರೆ.

ಐವರು ವಿದ್ಯಾರ್ಥಿಗಳು ನೀರುಪಾಲಾಗಿರುವ ಶಂಕೆ ವ್ಯಕ್ತವಾಗಿದೆ. ರಾಮನಗರ ಜಿಲ್ಲೆ ಕನಕಪುರ ಗ್ರಾಮಾಂತರ ಠಾಣೆ ಪೊಲಿಸರು ಘಟನಾ ಸ್ಥಳಕ್ಕೆ ದೌಡಾಯಿಸಿದ್ದಾರೆ

# ಅಣ್ಣಾಮಲೈಗೆ ರಾಜ್ಯದ ಮೇಲೆ ಯಾವ ಹಕ್ಕಿದೆ: ಡಾ. ತೇಜಸ್ವಿನಿ ಗೌಡ ಕಿಡಿ

ಬೆಳಗಾವಿ: " ನೀರಾವರಿ ಯೋಜನೆಯಾದ ಮೇಕೆದಾಟು ವಿಚಾರದಲ್ಲಿ ಕರ್ನಾಟಕವನ್ನು ನಿರ್ಲಕ್ಷ್ಯಿಸಿದ ಬಿಜೆಪಿ ಮುಖಂಡ ಅಣ್ಣಾಮಲೈಗೆ ರಾಜ್ಯದ ಮೇಲೆ ಯಾವ ಹಕ್ಕಿದೆ. ಅವರಿಗೆ ಬಿಜೆಪಿ ರಾಜ್ಯದ ಚುನಾವಣಾ ಜವಾಬ್ದಾರಿ ನೀಡಿರುವುದು ಅಪಹಾಸ್ಯಕರ " ಎಂದು ಕೆಪಿಸಿಸಿ ವಕ್ತಾರರಾದ ಡಾ. ತೇಜಸ್ವಿನಿ ಗೌಡ ಕಿಡಿಕಾರಿದರು.

ಇಲ್ಲಿನ ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಸೋಮವಾರ ಸುದ್ಧಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾವೇರಿ ನೀರಿನ ವಿಚಾರ, ಮೇಕೆದಾಟು ಯೋಜನೆಯ ಪ್ರತಿಭಟನೆಯಲ್ಲಿ ರಾಜ್ಯದ ನೀತಿಯನ್ನು ಖಂಡಿಸಿದ ಬಿಜೆಪಿ ಮುಖಂಡ



ಅಣ್ಣಾಮಲೈಗೆ ಇಲ್ಲಿನ ಬಿಜೆಪಿ ಚುನಾವಣೆ ಹೊಣೆ ಹೊರಿಸಲಾಗಿದೆ.

ಬಿಜೆಪಿಗೆ ಸ್ವಲ್ಪವಾದರೂ ಬುದ್ಧಿ ಬೇಡವಾ. ಯಾವ ಹಕ್ಕಿದೇ ಅಣ್ಣಾಮಲೈಗೆ ಇದು ನಮ್ಮ ನೇರ ಪ್ರಶ್ನೆ? ಸ್ವಾತಂತ್ರ್ಯ ಪೂರ್ವದಿಂದ ಇಲ್ಲಿವರೆಗೂ ದೇಶದ ರಕ್ಷಣೆಗೆ ಶ್ರಮಿಸಿದ ಕಾಂಗ್ರೆಸ್‌ಗೆ ಪಾಠ ಹೇಳುವ ಅಗತ್ಯ ಬಿಜೆಪಿಗೆ ಇಲ್ಲ,

ಕಳೆದ 10 ವರ್ಷದಲ್ಲಿ ದೇಶದ ಸ್ಥಿತಿ ಏನಾಗಿದೆ ಎಂಬುವುದು ದೇಶದ ಜನತೆಗೆ ಅರಿವಾಗಿದೆ. ಕಾರ್ಗಿಲ್ ಯುದ್ಧ ಸಂಭವಿಸಿದಾಗ ಬಿಜೆಪಿ ಎಲ್ಲಿತ್ತು ಎಂದು ಪ್ರಶ್ನಿಸಿದರು.

ಕಿಡಿಗೇಡಿಗಳಿಂದ ಸಂಸತ್ತನಲ್ಲಿ ಸಂಸದರ ಮೇಲೆ ಹಲ್ಲೆಯಾಗಿದೆ. ಇಲ್ಲಿವರೆಗೂ ಕೇಂದ್ರ ಸರ್ಕಾರ ಯಾವುದೇ ತನಿಖೆ ನಡೆಸಿಲ್ಲ, ಕಾಂಗ್ರೆಸ್ ಸರ್ಕಾರ ಅಧಿಕಾರ ಅವಧಿಯಲ್ಲಿ ಆದರೆ, ಸರ್ಕಾರದ ಬಿಜೆಪಿಗರು ಮುಗಿ ಬೀಳುತ್ತಿದ್ದರು ಯಾಕೆ ಇ ತರ ಮನಸ್ಥಿತಿ ನಿಮ್ಮದು.ತಪ್ಪಿಮಾಡಿದವರನ್ನು ಇನ್ನೂಳಿದ ಸಂಸದರನ್ನು ಅಮಾನತು ಮಾಡಿದೆ, ಪ್ರಜಾಪ್ರಭುತ್ವವನ್ನು ಕಟ್ಟಹಾಕಲು ನಾವು ಬೀಡುದಿಲ್ಲ ಎಂದು ಆಕ್ರೋಶ ಹೊರಹಾಕಿದರು.

ಮಹಿಳೆಯವರು ಜತೆ ಅಶ್ಲೀಲ್ ವಾಗಿ ನಡೆದುಕೊಳ್ಳುವ ದುಸ್ಥಿತಿ ಇರುವ ಪಕ್ಷ ಜತೆ ಬಿಜೆಪಿಗರು ಹೇಗೆ ಇರುತ್ತಾರೆ. ಹೊಳೆನರಸಿಪುರ , ರಾಜ್ಯದ ಮಾನ ಮರ್ಯಾದೆ ಹಾಳಗಿದೆ. ಹೆಣ್ಣು ಮಕ್ಕಳಿಗೆ ಯಾವರೀತಿ ಗೌರವ ನೀಡಬೇಕು ಎಂಬುವುದು ಪರಿಜ್ಞಾನ ಇಲ್ಲವಾ ನಿಮಗೆ, ತಂದೆಯವರು ಇದನ್ನೇ ಕಲಿಸಿಕೊಟ್ಟಿದ್ದಾರೆ ಎಂದು ಜೆಡಿಎಸ್ ಗೆ ಚಾಟಿ ಬೀಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089